ಸಂಪುಟ: 11 ಸಂಚಿಕೆ: 214 ಪುಟಗಳು: 4+2 ಬೆಲೆ: ₹ 3.00 ಬುಧವಾರ, ಸೆಪ್ಟೆಂಬರ್ 30, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 214 Pages : 4+2 Rate : 3.00 wednesday, September 30, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

### ನೀರಿನ ಸಮಸ್ಯೆಗೂ ಗಡುವು ನೀಡಿ: ಅನಿಲ್ ಮೆಣಸಿನಕಾಯಿ ಸವಾಲು ➧ ನಗರಸಭೆಗೆ ಬಿಜೆಪಿ ಕಾರ್ಯಕರ್ತರ ಮುತ್ತಿಗೆ ಯತ್ನ

# ನೀರು ಕೊಡಿ... ಇಲ್ಲವೇ ರಾಜೀನಾಮೆ ಕೊಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವಂತೆ ಆಗ್ರಹಿಸಿ ಬಿಜೆಪಿ ನೇತೃತ್ವದಲ್ಲಿ ಮಂಗಳವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ನೂರಾರು ಮಹಿಳೆಯರು ಖಾಲಿ ಕೊಡಗಳನ್ನು ಹಿಡಿದು ಬೀದಿಗಿಳಿದು ಆಕ್ರೋಶ ವ್ಯಕ್ತಪಡಿಸಿದರು. ಗಾಂಧಿ ವೃತ್ತದಲ್ಲಿ ಎರಡು ಗಂಟೆಗೂ ಹೆಚ್ಚು ಕಾಲ ಧರಣಿ ನಡೆಸಿದ ಪ್ರತಿಭಟನಕಾರರು ಬಳಿಕ ನಗರಸಭೆ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಪೊಲೀಸರು ಹಾಗೂ ಪ್ರತಿಭಟನಕಾರರ ನಡುವೆ ನೂಕಾಟ, ವಾಗ್ವಾದ ನಡೆಯಿತು.

ನಗರದ ಟಾಂಗಾಕೂಟ್‌ನಲ್ಲಿ ಬೆಳಗ್ಗೆ ಸಮಾವೇಶಗೊಂಡ ಬಿಜೆಪಿ ಕಾರ್ಯಕರ್ತರು ಹಾಗೂ ಮಹಿಳೆಯರು ಶಾಸಕ ಎಚ್.ಕೆ. ಪಾಟೀಲ ಅವರ ಭಾವಚಿತ್ರಕ್ಕೆ ಬೆಂಕಿ ಹಚ್ಚಿ ಹೋಮ ನಡೆಸುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಖಾಲಿ ಕೊಡಗಳನ್ನು ಹಿಡಿದು ಡೊಳ್ಳು ಮೇಳದೊಂದಿಗೆ ಪ್ರತಿಭಟನಾ ಮೆರವಣಿಗೆ ಆರಂಭಿಸಿದರು.

'ನೀರು ಕೊಡಿ, ಇಲ್ಲವೇ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ', 'ನೀರು ಕೊಡದ ಶಾಸಕ ಎಚ್.ಕೆ. ಪಾಟೀಲರಿಗೆ ಧಿಕ್ಕಾರ' ಎಂಬ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನಕಾರರು ಮಹಾತ್ಮ ಗಾಂಧಿ ವೃತ್ತದತ್ತ ಸಾಗಿದರು. ಕೆಲವರು ಬಾಯಿ ಬಡಿದುಕೊಂಡು ನೀರಿನ ಸಮಸ್ಯೆ ಕುರಿತು ಆಕ್ರೋಶ ವ್ಯಕ್ತಪಡಿಸಿದರು.

ಗಾಂಧಿ ವೃತ್ತದಲ್ಲಿ ಎರಡು ಗಂಟೆಗೂ ಹೆಚ್ಚು ಕಾಲ ಧರಣಿ ನಡೆಸಿದ ಬಳಿಕ ಪ್ರತಿಭಟನಕಾರರು ನಗರಸಭೆ ಕಚೇರಿಯತ್ತ ತೆರಳಿದರು. ಕಚೇರಿಗೆ



ಮುತ್ತಿಗೆ ಹಾಕಲು ಮುಂದಾದಾಗ ಪೊಲೀಸರು ಅಳವಡಿಸಿದ್ದ ಬ್ಯಾರಿಕೇಡ್‌ಗಳನ್ನು ಬದಿಗೆ ಸರಿಸಿ ಒಳನುಗ್ಗಲು ಯತ್ನಿಸಿದರು. ಕೆಲವರು ಬ್ಯಾರಿಕೇಡ್ ಉರುಳಿಸಿ ಗೇಟ್ ಹತ್ತಲು ಮುಂದಾದರು. ಈ ವೇಳೆ ಪೊಲೀಸರು ಹಾಗೂ ಪ್ರತಿಭಟನಕಾರರ ನಡುವೆ ನೂಕಾಟ, ವಾಗ್ವಾದ ನಡೆಯಿತು. ಪರಿಸ್ಥಿತಿ ನಿಯಂತ್ರಿಸಲು ಪೊಲೀಸರು ಹರಸಾಹಸಪಟ್ಟರು. ಬಳಿಕ ಪಕ್ಷದ ಮುಖಂಡರ ಸೂಚನೆಯಂತೆ ಪ್ರತಿಭಟನಕಾರರು ಹಿಂದೆ ಸರಿದರು.

ನಂತರ ಜಿಲ್ಲಾಧಿಕಾರಿ ಹಾಗೂ ನಗರಸಭೆ ಆಡಳಿತಾಧಿಕಾರಿ ಸಿ.ಎನ್. ಶ್ರೀಧರ್ ಸ್ಥಳಕ್ಕೆ ಆಗಮಿಸಿ ಪ್ರತಿಭಟನಕಾರರಿಂದ ಮನವಿ ಸ್ವೀಕರಿಸಿದರು. ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಶೀಘ್ರ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

*ಐದು ದಶಕದ ನೀರಿನ ಸಮಸ್ಯೆಗೆ ಗಡುವು ಏಕೆ ಇಲ್ಲ?*

ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ ಅವರು ನೀರಿನ ಸಮಸ್ಯೆ ಕುರಿತು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಗದಗ-ಬೆಟಗೇರಿ ಅವಳಿ ನಗರದಲ್ಲಿ ಐದು ದಶಕಗಳಿಂದ ಕುಡಿಯುವ ನೀರಿನ ಸಮಸ್ಯೆ ಮುಂದುವರಿದಿದೆ. ಮಳೆ ಕೊರತೆಯಿಂದ ಕೆರೆ-ಹಳ್ಳಗಳು ಬತ್ತಿದ್ದು, ಅಂತರ್ಜಲ ಮಟ್ಟವೂ ಕುಸಿದಿದೆ. ಇಂತಹ ಸಂದರ್ಭದಲ್ಲಿ ಜನರ ದಾಹ ನೀಗಿಸಲು ಶಾಶ್ವತ ಪರಿಹಾರ ಕಲ್ಪಿಸುವ ಬದಲು ಸಮಸ್ಯೆಯನ್ನು ಮುಂದೂಡಲಾಗುತ್ತಿದೆ ಎಂದು ಆರೋಪಿಸಿದರು. ಹುಲಕೋಟಿಗೆ ಪೈಪ್‌ಲೈನ್ ತಿರುಗಿಸಿ ನೀರು ಪೂರೈಸಲಾಗುತ್ತಿದೆ. ಇದರಿಂದ ಹುಲಕೋಟಿಯನ್ನೇ ತಮ್ಮ ಮತಕ್ಷೇತ್ರ

> ಅವಳಿ ನಗರದ ಜನರು ಐದು ದಶಕಗಳಿಂದ ನೀರಿಗಾಗಿ ಪರದಾಡುತ್ತಿದ್ದಾರೆ. ಬರದ ವಿಚಾರದಲ್ಲಿ ಗಡುವು ನೀಡುವಂತೆ ನೀರಿನ ಸಮಸ್ಯೆ ಪರಿಹಾರಕ್ಕೂ ಗಡುವು ನೀಡಬೇಕು. ಜನರ ದಾಹ ನೀಗಿಸುವುದು ಆಡಳಿತದ ಮೊದಲ ಆದ್ಯತೆಯಾಗಬೇಕು.
>
> **– ಅನಿಲ್ ಮೆಣಸಿನಕಾಯಿ, ಬಿಜೆಪಿ ಮುಖಂಡ**

ಮಾಡಿಕೊಂಡಿದ್ದಾರೆ ಎಂಬ ಭಾವನೆ ಜನರಲ್ಲಿ ಮೂಡಿದೆ ಎಂದು ಅನಿಲ್ ಮೆಣಸಿನಕಾಯಿ ಶಾಸಕ ಎಚ್.ಕೆ. ಪಾಟೀಲರನ್ನು ಟೀಕಿಸಿದರು.

ಬರಪೀಡಿತ ಪ್ರದೇಶಗಳ ಪಟ್ಟಿಗೆ ಗದಗ ಸೇರ್ಪಡೆ ವಿಚಾರದಲ್ಲಿ ಎಚ್.ಕೆ. ಪಾಟೀಲರು ಗಡುವು ನೀಡಿ ರಾಜೀನಾಮೆ ಹೇಳಿಕೆ ನೀಡಿದ್ದರು. ಅದೇ ರೀತಿ ಅವಳಿ ನಗರದ ದಶಕಗಳ ನೀರಿನ ಸಮಸ್ಯೆ ಪರಿಹಾರಕ್ಕೂ ಗಡುವು ನೀಡಬೇಕು ಎಂದು ಅವರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಲಿಂಗರಾಜ ಪಾಟೀಲ, ವಿಜಯಕುಮಾರ ಗಡ್ಡಿ, ಸಿದ್ದಣ್ಣ ಪಲ್ಲೇದ, ಅನಿಲ ಅಬ್ಬಿಗೇರಿ, ಉಷಾ ದಾಸರ, ವಿನಾಯಕ ಮಾನ್ವಿ, ರಾಘವೇಂದ್ರ ಯಳವತ್ತಿ, ವಸಂತ ಪಡಗದ, ಇರ್ಷಾದ ಮಾನ್ವಿ, ಮಾಧವ ಗಣಾಚಾರಿ, ರವಿಕಾಂತ ಅಂಗಡಿ, ಮಹೇಶ ದಾಸರ, ಮೋಹನ ವರವಿ, ಅರವಿಂದ ಹುಲ್ಲೂರ ಸೇರಿದಂತೆ ನಗರಸಭೆಯ ಬಿಜೆಪಿ ಸದಸ್ಯರು ಹಾಗೂ ನೂರಾರು ಮಹಿಳೆಯರು ಭಾಗವಹಿಸಿದ್ದರು.

### ಸರಕಾರ, ಸ್ಥಳೀಯ ಆಡಳಿತ ವಿಫಲ: ಸಿ.ಸಿ. ಪಾಟೀಲ

**ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ನರಗುಂದ ಶಾಸಕ ಸಿ.ಸಿ. ಪಾಟೀಲ, ಗದಗ-ಬೆಟಗೇರಿ ಅವಳಿ ನಗರಕ್ಕೆ ಸಮರ್ಪಕ ಕುಡಿಯುವ ನೀರು ಒದಗಿಸುವಲ್ಲಿ ಸರ್ಕಾರ ಹಾಗೂ ಸ್ಥಳೀಯ ಆಡಳಿತ ವಿಫಲವಾಗಿವೆ ಎಂದು ಆರೋಪಿಸಿದರು. ನೀರಿನ ಸಮಸ್ಯೆಯ ತೀವ್ರತೆಗೆ ಪ್ರತಿಭಟನೆಯಲ್ಲಿ ಭಾಗವಹಿಸಿರುವ ಮಹಿಳೆಯರ ಸಂಖ್ಯೆಯೇ ಸಾಕ್ಷಿ ಎಂದ ಅವರು, ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸುವ ಮುನ್ನ ಜಿಲ್ಲಾಡಳಿತ ಹಾಗೂ ನಗರಸಭೆ ಸಮರ್ಪಕ ನೀರು ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.**



### ಪುಟ್ಟರಾಜ ಗವಾಯಿಗಳ ಅಂಧರ ಶಿಕ್ಷಣ ಸಮಿತಿ ಹಾಗೂ ಅಂಗಸಂಸ್ಥೆಗಳಿಂದ ಜಿ.ಎಸ್. ಪಾಟೀಲರಿಗೆ ಅಭಿನಂದನೆ

# ಶಿಕ್ಷಣ ಸಮಿತಿಗೆ ಜೀವ ಇರುವವರೆಗೂ ಚಿರಋಣಿ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ವೀರೇಶ್ವರ ಪುಣ್ಯಾಶ್ರಮ ಹಾಗೂ ಅದರ ಅಂಗಸಂಸ್ಥೆಗಳ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸುವ ಸಂಕಲ್ಪ ಮಾಡಬೇಕು. ಆಗ ಮಾತ್ರ ತಾವು ಸನ್ಮಾನ ಸ್ವೀಕರಿಸಿದಕ್ಕೆ ನಿಜವಾದ ಸಂತೃಪ್ತಿ ಸಿಗುತ್ತದೆ ಎಂದು ವಿಧಾನಸಭೆಯ ನೂತನ ಸಭಾಧ್ಯಕ್ಷರು ಹಾಗೂ ಡಾ. ಪಂ. ಪುಟ್ಟರಾಜ ಗವಾಯಿಗಳವರ ಅಂಧರ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಜಿ.ಎಸ್. ಪಾಟೀಲ ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಮಂಗಳವಾರ ಡಾ. ಪಂ. ಪುಟ್ಟರಾಜ ಗವಾಯಿಗಳವರ ಅಂಧರ ಶಿಕ್ಷಣ ಸಮಿತಿ ಹಾಗೂ ಅಂಗಸಂಸ್ಥೆಗಳ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸಮಿತಿಯ ಅಭಿವೃದ್ಧಿಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಕರಿಸಿದ ಎಲ್ಲರನ್ನೂ ಸ್ಮರಿಸಿದ ಅವರು, ಈ ಸನ್ಮಾನಕ್ಕೆ ಜೀವ ಇರುವವರೆಗೂ ಸಮಿತಿಗೆ ಚಿರಋಣಿಯಾಗಿರುತ್ತೇನೆ ಎಂದರು. ಶ್ರೀಮಠದಲ್ಲಿ ತುಲಾಭಾರ ನಡೆಸುವುದರಿಂದ ಅಂಧ, ಅನಾಥ ಹಾಗೂ ನಿರ್ಗತಿಕ ಮಕ್ಕಳಿಗೆ ನೆರವಾಗಲಿದೆ ಎಂದು ಹೇಳಿದರು.

ಮಾಜಿ ಸಚಿವ ಹಾಗೂ ಶಾಸಕ ಡಾ. ಎಚ್. ಕೆ. ಪಾಟೀಲ ಮಾತನಾಡಿ, ಶ್ರೀ ವೀರೇಶ್ವರ




ಪುಣ್ಯಾಶ್ರಮ ಅಂಧರು ಹಾಗೂ ಅನಾಥರಿಗೆ ಸಂಗೀತ ಶಿಕ್ಷಣ ನೀಡಿ ಸ್ವಾಭಿಮಾನದಿಂದ ಬದುಕುವ ದಾರಿ ತೋರಿಸಿದೆ. ನೈಜ ಬದುಕಿಗೆ ಅಗತ್ಯವಾದ ಕೌಶಲ್ಯ ಕಲಿಸುವ ಮೂಲಕ ಮಾನವ ಹಕ್ಕುಗಳನ್ನು ಉಳಿಸಿ ಬೆಳೆಸುವ ಕೆಲಸ ಮಾಡುತ್ತಿದೆ ಎಂದರು.

ಜಿ.ಎಸ್. ಪಾಟೀಲ ಅವರು ಸುಮಾರು 50 ವರ್ಷಗಳ ರಾಜಕೀಯ ಅನುಭವ ಹೊಂದಿದ್ದು, ಸಭಾಧ್ಯಕ್ಷರಾದ ಬಳಿಕ ರೈತರ ಸಮಸ್ಯೆಗಳಿಗೆ ಸ್ಪಂದಿಸಿ ಧ್ವನಿ ಎತ್ತುತ್ತಿದ್ದಾರೆ. ಅಂಧರ ಶಿಕ್ಷಣ ಸಮಿತಿಯ ಕಾರ್ಯದರ್ಶಿಯಾಗಿ ಸಾಕಷ್ಟು ಸೇವೆ ಸಲ್ಲಿಸಿದ್ದು, ಅವರಿಂದ ಇನ್ನಷ್ಟು ಕಾರ್ಯಗಳು ನಡೆಯಲಿ ಎಂದು ಹಾರೈಸಿದರು.

ಶಿರಹಟ್ಟಿಯ ಫಕ್ಕೀರೇಶ್ವರ ಭಾವೈಕ್ಯತಾ ಪೀಠದ ಜಗದ್ಗುರು ದಿಂಗಾಲೇಶ್ವರ ಶ್ರೀಗಳು ಮಾತನಾಡಿ, ವ್ಯಕ್ತಿಯ ಅಧಿಕಾರಕ್ಕಿಂತ ವ್ಯಕ್ತಿತ್ವಕ್ಕೆ ಗೌರವ ನೀಡಬೇಕು. ಜಿ.ಎಸ್. ಪಾಟೀಲ ಹಾಗೂ ಎಚ್.ಕೆ. ಪಾಟೀಲ ಅವರು ಗದಗ ಜಿಲ್ಲೆಗೆ ಎರಡು ಕಣ್ಣುಗಳಿದ್ದಂತೆ. ಸೋಲಿನಲ್ಲಿ ಕುಗ್ಗದೆ, ಗೆಲುವಿನಲ್ಲಿ ಹಿಗ್ಗದೆ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಕಲ್ಲಯ್ಯಜ್ಜನವರು ಮಾತನಾಡಿ, ಗುರುಗಳ ಸೇವೆಗೆ ಜಿ.ಎಸ್. ಪಾಟೀಲ ಹಾಗೂ ಎಚ್. ಕೆ. ಪಾಟೀಲ ಅವರು ಉತ್ತಮ ಉದಾಹರಣೆ. ಇಬ್ಬರೂ ಜಿಲ್ಲೆಗೆ ಜೋಡೆತ್ತುಗಳಂತೆ ಕಾರ್ಯನಿರ್ವಹಿಸುತ್ತಿದ್ದು, ಶಿಕ್ಷಣ ಸಂಸ್ಥೆಯ ಸಿಬ್ಬಂದಿಗೆ ಆಶ್ರಯದಾತರಾಗಬೇಕು ಎಂದರು.

ಡಾ. ಪಿಜಿಎಸ್ ಸಮಿತಿಯ ಉಪಾಧ್ಯಕ್ಷ ಡಾ. ಪಂ. ರಾಜಗುರು ಗುರುಸ್ವಾಮಿ ಕಲಿಕೇರಿ ಮಾತನಾಡಿ, ಪಂ. ಪುಟ್ಟರಾಜ ಗವಾಯಿಗಳು ಜಿ. ಎಸ್. ಪಾಟೀಲ ಅವರಿಗೆ ಶಿಕ್ಷಣ ಸಂಸ್ಥೆಯನ್ನು

> ಈ ಸನ್ಮಾನಕ್ಕೆ ನಾನು ಜೀವ ಇರುವವರೆಗೂ ಸಮಿತಿಗೆ ಚಿರಋಣಿಯಾಗಿರುತ್ತೇನೆ. ಶ್ರೀ ವೀರೇಶ್ವರ ಪುಣ್ಯಾಶ್ರಮ ಹಾಗೂ ಅದರ ಅಂಗಸಂಸ್ಥೆಗಳ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು.
>
> **– ಜಿ.ಎಸ್. ಪಾಟೀಲ, ವಿಧಾನಸಭೆಯ ಸಭಾಧ್ಯಕ್ಷರು**

ಮುನ್ನಡೆಸುವ ಜವಾಬ್ದಾರಿ ನೀಡಿದ್ದರು. ಅವರ ಮಾರ್ಗದರ್ಶನದಲ್ಲಿ ಸಂಸ್ಥೆ ಮತ್ತಷ್ಟು ಅಭಿವೃದ್ಧಿಯಾಗಲಿ ಎಂದು ಆಶಿಸಿದರು.

ಎಸ್.ಎಂ. ಗೌಡರ, ರಾಜಣ್ಣ ಗುಡಿಮನಿ, ಅಪ್ಪಣ್ಣ ಇನಾಮತಿ ಮಾತನಾಡಿದರು. ವೇದಿಕೆಯಲ್ಲಿ ಐ.ಎಸ್. ಪಾಟೀಲ, ಶಿವರುದ್ರಪ್ಪ ಇಟಗಿ, ವಿ.ಬಿ. ಸೋಮನಕಟ್ಟಿ, ಗಂಗಾ ಚಕ್ರಣ್ಣವರ, ಮಹೇಶ್ವರ ಸ್ವಾಮೀಜಿ, ಬಿ.ಬಿ. ಅಸೂಟಿ, ಪ್ರಭು ಅರವಟಿಗಿಮಠ, ಎಸ್.ಎನ್. ಬಳ್ಳಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಂಧರ ವಸತಿಯುತ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳಿಂದ ಪ್ರಾರ್ಥನೆ ಹಾಗೂ ಸಂಗೀತ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಂದ ಸಂಗೀತ ಕಾರ್ಯಕ್ರಮ ನಡೆಯಿತು.

### ವಿದ್ಯಾರ್ಥಿಗಳಿಂದ ಸಮಾಜದಲ್ಲಿ ಅರಿವು ಮೂಡಲಿ: ಡಿಸಿ

# ಜಾಗೃತ ಯುವಶಕ್ತಿ ಎಚ್‌ಐವಿ ವಿರುದ್ಧದ ದೊಡ್ಡ ಶಕ್ತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಎಚ್‌ಐವಿ ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ಯುವ ಸಮುದಾಯದಲ್ಲಿ ಇನ್ನಷ್ಟು ಜಾಗೃತಿ ಮೂಡಿಸುವ ಮೂಲಕ ಸೋಂಕಿನ ಪ್ರಮಾಣವನ್ನು ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಸೇರಿದಂತೆ ವಿವಿಧ ಇಲಾಖೆಗಳು ಹಾಗೂ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿದ್ದ ತೀವ್ರತರದ ಐಇಸಿ ಪ್ರಚಾರಾಂದೋಲನ?2026ರ ಅಂಗವಾಗಿ ರೆಡ್ ರಿಬ್ಬನ್ ಕಾಲೇಜು ವಿದ್ಯಾರ್ಥಿಗಳ 5 ಕಿ.ಮೀ. ಮ್ಯಾರಾಥಾನ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವಕರು ಎಚ್‌ಐವಿ ಹಾಗೂ ಏಡ್ಸ್ ಕುರಿತು ವೈಜ್ಞಾನಿಕ ಮಾಹಿತಿ ಪಡೆದು ಸಮಾಜದಲ್ಲಿ ಜಾಗೃತಿ ಮೂಡಿಸಬೇಕು. ಆರೋಗ್ಯಕರ ಜೀವನಶೈಲಿ ರೂಢಿಸಿಕೊಂಡು ಸಂಯಮದಿಂದ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು. ಯುವಶಕ್ತಿಯ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ಆರೋಗ್ಯವಂತ ಹಾಗೂ ಸಮೃದ್ಧ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಮೋಬಲೈಜೇಶನ್ ಫಾರ್ ಏಡ್ಸ್ ಸುರಕ್ಷಾ ಅಭಿಯಾನದಡಿ 'ನಿಮ್ಮ ಸ್ಥಿತಿಯನ್ನು ತಿಳಿದುಕೊಳ್ಳಿ' ಎಂಬ ಸಂದೇಶದೊಂದಿಗೆ ಕ್ಯೂಆರ್ ಕೋಡ್ ಸ್ಕ್ಯಾನ್ ಮೂಲಕ ಅಗತ್ಯ ಮಾಹಿತಿ ಪಡೆದುಕೊಳ್ಳುವಂತೆ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ವಿದ್ಯಾರ್ಥಿಗಳು ಯೌವನದಲ್ಲಿಯೇ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ ಆರೋಗ್ಯಕರ ನಡವಳಿಕೆಗಳನ್ನು ರೂಢಿಸಿಕೊಳ್ಳಬೇಕು ಎಂದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಮಾತನಾಡಿ, ಎಚ್‌ಐವಿ ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ಯುವ ಸಮುದಾಯ ಜಾಗೃತಿ ಮೂಡಿಸುವ ಮೂಲಕ

### ಮ್ಯಾರಾಥಾನ್‌ನಲ್ಲಿ ಮಿಂಚಿದ ಪ್ರತಿಭೆಗಳು

**ಪುರುಷರ ವಿಭಾಗ: ರಮೇಶ ಸಿಂಗಟಾನಕೇರಿ ಪ್ರಥಮ, ಗಂಗಾಧರ ಗಚ್ಚಿನಮಠ ದ್ವಿತೀಯ, ಪ್ರಶಾಂತ ಜಕ್ಕಮ್ಮನವರ ತೃತೀಯ. ವಿದ್ಯಾರ್ಥಿನಿಯರ ವಿಭಾಗ: ಬಸಮ್ಮ ಕುರಿ ಪ್ರಥಮ, ಅನಸವ್ವ ಕಲ್ಲೂರ ದ್ವಿತೀಯ, ಮಾಲತಿ ಉಮ್ಮಣ್ಣವರ ತೃತೀಯ. ವಿಜೇತರಿಗೆ ಪ್ರಶಸ್ತಿ ಹಾಗೂ ಪದಕ ನೀಡಿ ಗೌರವಿಸಲಾಯಿತು.**

> ಜಿಲ್ಲೆಯಲ್ಲಿ ಎಚ್‌ಐವಿ ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ವಿದ್ಯಾರ್ಥಿಗಳು ಎಚ್‌ಐವಿ ಏಡ್ಸ್ ಬಗ್ಗೆ ಮಾಹಿತಿ ತಿಳಿದುಕೊಂಡು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕು.
>
> **–ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ**

ಜಿಲ್ಲೆಯಲ್ಲಿ ಸೋಂಕಿನ ಪ್ರಮಾಣವನ್ನು ಶೂನ್ಯಕ್ಕೆ ತರುವ ಪ್ರಯತ್ನಕ್ಕೆ ಕೈಜೋಡಿಸಬೇಕು ಎಂದರು.

ಎಚ್‌ಐವಿ ಏಡ್ಸ್ ಕುರಿತು ಅರಿವು ಮೂಡಿಸುವುದು, ಸೇವಾ ಸೌಲಭ್ಯಗಳ ಮಾಹಿತಿ ನೀಡುವುದು, ಕಳಂಕ ಹಾಗೂ ತಾರತಮ್ಯ ತಡೆಗಟ್ಟುವುದು, ಎಚ್‌ಐವಿ ಏಡ್ಸ್ ತಡೆ ಕಾಯ್ದೆ?2017, ನ್ಯಾಕೋ ಏಡ್ಸ್ ಆ?ಯಪ್, ಉಚಿತ ಸಹಾಯವಾಣಿ 1097 ಹಾಗೂ ಎಸ್‌ಟಿಐ ಸೋಂಕುಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವುದು ಮ್ಯಾರಾಥಾನ್‌ನ ಉದ್ದೇಶವಾಗಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಹಸಿರು ನಿಶಾನೆ ತೋರಿಸುವ ಮೂಲಕ ಮ್ಯಾರಾಥಾನ್‌ಗೆ ಚಾಲನೆ ನೀಡಿದರು.

ಮ್ಯಾರಾಥಾನ್‌ನಲ್ಲಿ ಸುಮಾರು 250 ವಿದ್ಯಾರ್ಥಿ-ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಪರ್ವೇಜ್ ಪತ್ತೆಗೆ ಸರ್ಕಾರದಿಂದ ಕ್ರಮ: ಈಶ್ವರ ಖಂಡ್ರೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಗದಗ ಕೆಆರ್‌ಐಡಿಎಲ್ ಉಪವಿಭಾಗದ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಪರ್ವೇಜ್ ಧಾರವಾಡ ನಾಪತ್ತೆ ಪ್ರಕರಣದಲ್ಲಿ ಸರ್ಕಾರ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಪರ್ವೇಜ್ ಅವರ ತಂದೆ ಜಾಫರ್ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿದ ಸಚಿವರು, ಧೈರ್ಯದಿಂದ ಇರುವಂತೆ ತಿಳಿಸಿ, ಪರ್ವೇಜ್‌ರನ್ನು ಪತ್ತೆಹಚ್ಚಲು ಸರ್ಕಾರದಿಂದ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಭರವಸೆ ನೀಡಿದರು.

ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಡಿಜಿಪಿ ಅವರೊಂದಿಗೆ ಮಾತನಾಡಿ ಪರ್ವೇಜ್ ಪತ್ತೆಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿರುವುದಾಗಿಯೂ ತಿಳಿಸಿದರು.



ಪರ್ವೇಜ್ ಅವರ ನಾಪತ್ತೆ ಪ್ರಕರಣದ ಕುರಿತು ತನಿಖೆ ನಡೆಸುವಂತೆ ಸೂಚಿಸಲಾಗಿದೆ. ಹಣ ಪಾವತಿ ವಿಚಾರವಾಗಿ ಆತಂಕಪಡುವ ಅಗತ್ಯವಿಲ್ಲ. ಪರ್ವೇಜ್ ಸಂಪರ್ಕಕ್ಕೆ ಬಂದರೆ ಯಾವುದೇ ಸಮಸ್ಯೆ ಇದ್ದರೂ ಸರ್ಕಾರದ ಮಟ್ಟದಲ್ಲಿ ಪರಿಹರಿಸುವುದಾಗಿ ಸಚಿವರು ಕುಟುಂಬಕ್ಕೆ ತಿಳಿಸಿದರು.

ಪರ್ವೇಜ್ ನಾಪತ್ತೆ ಹಿನ್ನೆಲೆಯಲ್ಲಿ ಸಚಿವ ಈಶ್ವರ ಖಂಡ್ರೆ ಅವರು ಕೆಆರ್‌ಐಡಿಎಲ್ ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಮುಖ್ಯ ಎಂಜಿನಿಯರ್‌ಗಳಾದ ತಿಮ್ಮರಾಜಪ್ಪ, ಶ್ರೀನಿವಾಸ್ ಹಾಗೂ ವೇಣುಗೋಪಾಲ್ ಮತ್ತು ಗದಗದ ಎಂಜಿನಿಯರ್‌ಗಳೊಂದಿಗೆ ಸಭೆ ನಡೆಸಿದರು.

ಸಭೆಯಲ್ಲಿ ಕಾಮಗಾರಿಗಳ ಪ್ರಗತಿ, ಅನುದಾನ ಹಾಗೂ ಬಾಕಿ ಪಾವತಿ ಸೇರಿದಂತೆ ಸಂಬಂಧಿತ ವಿಷಯಗಳ ಕುರಿತು ಮಾಹಿತಿ ಪಡೆದ ಸಚಿವರು, ಮುಖ್ಯ ಎಂಜಿನಿಯರ್‌ಗಳು ಕಾಮಗಾರಿ ಸ್ಥಳಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಿದರು.

ಪರ್ವೇಜ್ ಅವರ ಪತ್ತೆ ಕಾರ್ಯಕ್ಕೆ ಸಂಬಂಧಿಸಿದಂತೆ ಪೊಲೀಸರು ಐದು ವಿಶೇಷ ತಂಡಗಳನ್ನು ರಚಿಸಿರುವುದಾಗಿ ಗದಗ ಪೊಲೀಸರು ಈಗಾಗಲೇ ತಿಳಿಸಿದ್ದಾರೆ. ಪರ್ವೇಜ್ ಅವರ ಕೊನೆಯ ಮೊಬೈಲ್ ಸ್ಥಳ ವಿಜಯವಾಡದಲ್ಲಿ ಪತ್ತೆಯಾಗಿದ್ದು, ಶೋಧ ಕಾರ್ಯ ಮುಂದುವರಿದಿದೆ.

## ಪ್ರಜಾಸೌಧಕ್ಕೂ ಮುನ್ನ ಗುಡಿಸಲುವಾಸಿಗಳಿಗೆ ಸೂರು ಕೊಡಿ

# ವಸತಿ ಕಲ್ಪಿಸದೆ ತೆರವುಗೊಳಿಸಿದರೆ ಹೋರಾಟದ ಎಚ್ಚರಿಕೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ದೊಡ್ಡೂರು ರಸ್ತೆಗೆ ಹೊಂದಿಕೊಂಡಿರುವ ಸರ್ಕಾರಿ ಜಾಗದಲ್ಲಿ ಕಳೆದ 25-30 ವರ್ಷಗಳಿಂದ ಗುಡಿಸಲು ಹಾಕಿಕೊಂಡು ವಾಸಿಸುತ್ತಿರುವ ಕುಟುಂಬಗಳನ್ನು ಪ್ರಜಾಸೌಧ ನಿರ್ಮಾಣದ ಹಿನ್ನೆಲೆಯಲ್ಲಿ ತೆರವುಗೊಳಿಸುವ ಕ್ರಮಕ್ಕೆ ನಿವಾಸಿಗಳು ವಿರೋಧ ವ್ಯಕ್ತಪಡಿಸಿದ್ದಾರೆ. ಮೊದಲು ಸೂಕ್ತ ವಸತಿ ನಿವೇಶನ ಕಲ್ಪಿಸಿ ಬಳಿಕ ತೆರವುಗೊಳಿಸಬೇಕು ಎಂದು ಗದಗ ಜಿಲ್ಲಾ ಕೊರಮ (ಭಜಂತ್ರಿ) ಸಮಾಜದ ಜಿಲ್ಲಾಧ್ಯಕ್ಷ ಹುಲ್ಲೇಶ ಭಜಂತ್ರಿ ಒತ್ತಾಯಿಸಿದರು.

ಸರ್ಕಾರಿ ಜಾಗದಲ್ಲಿ ಹಲವು ವರ್ಷಗಳಿಂದ ವಾಸಿಸುತ್ತಿರುವ ವಿವಿಧ ಜಾತಿ, ಜನಾಂಗಗಳ ಕುಟುಂಬಗಳ ಸದಸ್ಯರು ಸೋಮವಾರ ಪುರಸಭೆ ಹಾಗೂ ತಹಸೀಲ್ದಾರ್ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು. ಮೊದಲು ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಅವರಿಗೆ ಮನವಿ ಸಲ್ಲಿಸಿದ ಬಳಿಕ ತಹಸೀಲ್ದಾರ್ ಧನಂಜಯ ಎಂ. ಅವರಿಗೆ ಮನವಿ ಸಲ್ಲಿಸಿದರು.

ಕಳೆದ ಹಲವು ವರ್ಷಗಳಿಂದ ಕೂಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿರುವ ಈ ಕುಟುಂಬಗಳಿಗೆ ಶಾಶ್ವತ ಸೂರು ಕಲ್ಪಿಸುವ ನಿಟ್ಟಿನಲ್ಲಿ ಯಾವುದೇ ಕ್ರಮ ಕೈಗೊಂಡಿಲ್ಲ. ಇದೀಗ ಪ್ರಜಾಸೌಧ ನಿರ್ಮಾಣಕ್ಕಾಗಿ ಏಕಾಏಕಿ ತೆರವುಗೊಳಿಸುವುದು ಸರಿಯಲ್ಲ. ವಸತಿ ವ್ಯವಸ್ಥೆ ಕಲ್ಪಿಸದೆ ತೆರವುಗೊಳಿಸಿದರೆ ಕುಟುಂಬಗಳು ಬೀದಿಗೆ ಬೀಳಲಿವೆ ಎಂದು ನಿವಾಸಿಗಳು ಆತಂಕ ವ್ಯಕ್ತಪಡಿಸಿದರು.

> 25-30 ವರ್ಷಗಳಿಂದ ವಾಸಿಸುತ್ತಿರುವ ಕುಟುಂಬಗಳಿಗೆ ಮೊದಲು ನೆಲೆ ಕಲ್ಪಿಸಬೇಕು. ವಸತಿ ವ್ಯವಸ್ಥೆ ಮಾಡದೆ ತೆರವುಗೊಳಿಸುವುದನ್ನು ಒಪ್ಪುವುದಿಲ್ಲ. ನ್ಯಾಯ ಸಿಗುವವರೆಗೂ ಹೋರಾಟ ಕೈಬಿಡುವುದಿಲ್ಲ.
> – ಕೇಶವ ಕಟ್ಟಿಮನಿ, ಯುವ ಮುಖಂಡ

ಜಿಲ್ಲಾ ಅಲೆಮಾರಿ ಸಮಾಜದ ನಾಮನಿರ್ದೇಶಿತ ಸದಸ್ಯ ರಾಘವೇಂದ್ರ ಪೂಜಾರ ಹಾಗೂ ಯುವ ಮುಖಂಡ ಕೇಶವ ಕಟ್ಟಿಮನಿ ಮಾತನಾಡಿ, 25-30 ವರ್ಷಗಳಿಂದ ವಾಸಿಸುತ್ತಿರುವ ಕುಟುಂಬಗಳಿಗೆ ಸೂಕ್ತ ನ್ಯಾಯ ಒದಗಿಸಬೇಕು. ಬಲವಂತವಾಗಿ ತೆರವುಗೊಳಿಸುವ ಪ್ರಯತ್ನ ನಡೆದರೆ ಮೇಲಾಧಿಕಾರಿಗಳ ಮೊರೆ ಹೋಗಲಾಗುವುದು. ನ್ಯಾಯ ದೊರೆಯುವವರೆಗೂ ಹೋರಾಟ ಮುಂದುವರಿಸಲಾಗುವುದು ಎಂದು ಎಚ್ಚರಿಸಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರ್ ಧನಂಜಯ ಎಂ. ಅವರು ಜಿಲ್ಲಾಧಿಕಾರಿ ಹಾಗೂ ಉಪವಿಭಾಗಾಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ನಿವಾಸಿಗಳು ನೂರಾರು ಸಂಖ್ಯೆಯಲ್ಲಿ ಘೋಷಣೆಗಳನ್ನು ಕೂಗುತ್ತಾ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಕೊರಮ ಸಮಾಜದ ಜಿಲ್ಲಾ ಉಪಾಧ್ಯಕ್ಷ ಶಂಕ್ರಪ್ಪ ಭಜಂತ್ರಿ, ಪ್ರಧಾನ ಕಾರ್ಯದರ್ಶಿ ಮುತ್ತು ಭಜಂತ್ರಿ, ಜಿಲ್ಲಾ ಅಲೆಮಾರಿ ಸಮಾಜದ ನಾಮನಿರ್ದೇಶಿತ ಸದಸ್ಯ ರಮೇಶ ಹಂಗನಕಟ್ಟಿ, ಗದಗ-ಬೆಟಗೇರಿ ಕೊರಮ ಸಮಾಜದ ಅಧ್ಯಕ್ಷ ಕರಿಯಪ್ಪ ಭಜಂತ್ರಿ, ನಗರ ಅಧ್ಯಕ್ಷ ನಾಗರಾಜ ಭಜಂತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವೈಚಾರಿಕತೆ ಬದುಕಿನ ಭಾಗವಾಗಲಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬಸವಣ್ಣನವರ ಕಾಯಕ, ದಾಸೋಹ, ಸಮಾನತೆ ಹಾಗೂ ವೈಚಾರಿಕತೆಯ ತತ್ವಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗ ಸಮಾನತೆಯ ಸಮಾಜ ನಿರ್ಮಾಣ ಸಾಧ್ಯ ಎಂದು ನಿವೃತ್ತ ಮುಖ್ಯ ಶಿಕ್ಷಕ ಸಿ.ವಿ. ವಂಕಲಕುಂಟಿ ಹೇಳಿದರು.

ಪಟ್ಟಣದ ಮಹಾಂತೇಶ ವೀರಪ್ಪ ಕತ್ತಿಶೆಟ್ಟರ ಅವರ ಮನೆಯಲ್ಲಿ ನರೇಗಲ್ಲ-ಕೋಡಿಕೊಪ್ಪ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನಡೆದ 'ಮನೆಯಲ್ಲಿ ಮಹಾಮನೆ' ಮಾಸಿಕ ಸಭೆಯಲ್ಲಿ ಅವರು ಮಾತನಾಡಿದರು.

ಬಸವಣ್ಣನವರ ಚಿಂತನೆ ಕೇವಲ ವಚನಗಳಿಗೆ ಸೀಮಿತವಾಗದೆ ಬದುಕಿನಲ್ಲಿ ಅನುಷ್ಠಾನಗೊಳ್ಳಬೇಕಾದ ಮೌಲ್ಯವಾಗಿದೆ. ಜಾತಿ-ಮತದ ಭೇದಗಳನ್ನು ಮೀರಿ ಪ್ರತಿಯೊಬ್ಬರನ್ನೂ ಸಮಾನವಾಗಿ ಕಾಣಬೇಕು. ಕಾಯಕ ಸ್ವಾಭಿಮಾನ ನೀಡಿದರೆ, ದಾಸೋಹ ಸಮಾಜದೊಂದಿಗೆ ಬಾಂಧವ್ಯ

> ಬಸವಣ್ಣನವರ ಚಿಂತನೆ ಕೇವಲ ವಚನಗಳಲ್ಲಿ ಉಳಿಯದೆ, ಬದುಕಿನಲ್ಲಿ ಅನುಷ್ಠಾನಗೊಳ್ಳಬೇಕಾದ ಮೌಲ್ಯವಾಗಿದೆ. ಕಾಯಕ, ದಾಸೋಹ ಹಾಗೂ ಸಮಾನತೆಯ ತತ್ವಗಳನ್ನು ಅಳವಡಿಸಿಕೊಂಡಾಗ ಸಮಾಜದಲ್ಲಿ ಪರಸ್ಪರ ವಿಶ್ವಾಸ ಬೆಳೆಯುತ್ತದೆ.
> – ಸಿ.ವಿ. ವಂಕಲಕುಂಟಿ, ನಿವೃತ್ತ ಮುಖ್ಯ ಶಿಕ್ಷಕ

ಬೆಸೆಯುತ್ತದೆ ಎಂದರು.

ಸಭೆಯಲ್ಲಿ ಬಸವಾದಿ ಶರಣರ ವಚನಗಳನ್ನು ಪಠಿಸಲಾಯಿತು. ನಿವೃತ್ತ ಶಿಕ್ಷಕ ಗುರುಪಾದಪ್ಪ ಬೆಲ್ಲದ ವಚನ ಸಾಹಿತ್ಯ ಕುರಿತು ಮಾತನಾಡಿದರು. ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಿದ್ದರು. ಚನ್ನಬಸಪ್ಪ ಸೂಡಿ ಹಾಗೂ ಮಲ್ಲಿಕಾರ್ಜುನ ಕುರುಡಗಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

## ಸಾಕು ನಾಯಿಗಳಿಗೆ ಕಾಲಕಾಲಕ್ಕೆ ಲಸಿಕೆ ಹಾಕಿಸಿ

# ನಾಯಿ ಕಡಿತ ನಿರ್ಲಕ್ಷಿಸಿದರೆ ರೇಬಿಸ್ ಅಪಾಯ



**ವಿಜಯಸಾಕ್ಷಿ ಸುದ್ದಿ, ಗದಗ**

ರೇಬಿಸ್ ಮಾರಣಾಂತಿಕ ರೋಗವಾಗಿದ್ದರೂ ಸೂಕ್ತ ಮುನ್ನೆಚ್ಚರಿಕೆ ಹಾಗೂ ಸಮಯಕ್ಕೆ ಸರಿಯಾದ ಚಿಕಿತ್ಸೆಯಿಂದ ತಡೆಗಟ್ಟಬಹುದಾಗಿದೆ. ನಾಯಿ ಅಥವಾ ಇತರ ಪ್ರಾಣಿಗಳು ಕಡಿದಾಗ ನಿರ್ಲಕ್ಷ್ಯ ಮಾಡದೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಅಗತ್ಯ ರೇಬಿಸ್ ಲಸಿಕೆ ಪಡೆಯಬೇಕು ಎಂದು ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್. ಗಡಾದ ಹೇಳಿದರು.

ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಹಾಗೂ ಬೆಟಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳ ಸಭಾಭವನದಲ್ಲಿ ಆಯೋಜಿಸಿದ್ದ ವಿಶ್ವ ರೇಬಿಸ್ ದಿನ ಹಾಗೂ ಸಪ್ತಾಹ ಆಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರೇಬಿಸ್ ವೈರಸ್‌ನಿಂದ ಹರಡುವ ಸಾಂಕ್ರಾಮಿಕ ರೋಗವಾಗಿದ್ದು, ಸೋಂಕು ಮುಖ್ಯವಾಗಿ ಮೆದುಳಿನ ಜೀವಕೋಶಗಳಿಗೆ ಹಾನಿ ಉಂಟುಮಾಡುತ್ತದೆ. ನಾಯಿ ಕಡಿತ ಹಾಗೂ ಇತರ ಪ್ರಾಣಿಗಳ ಕಡಿತವನ್ನು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡಬಾರದು. ಕಡಿತವಾದ ಕೂಡಲೇ ವೈದ್ಯಕೀಯ ಸಲಹೆ ಪಡೆದು ಅಗತ್ಯ ಲಸಿಕೆ ಪಡೆಯುವುದು ಅತ್ಯಂತ ಮುಖ್ಯವಾಗಿದೆ ಎಂದರು.

ಸಾಕು ನಾಯಿಗಳಿಗೆ ಆಯಾ ಮಾಲೀಕರು ಕಾಲಕಾಲಕ್ಕೆ ರೇಬಿಸ್ ಲಸಿಕೆ ಹಾಕಿಸುವುದು ಅತ್ಯಗತ್ಯ. ಈ ಮೂಲಕ ರೇಬಿಸ್ ಸೋಂಕಿನ ಹರಡುವಿಕೆಯನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ. ಸಾರ್ವಜನಿಕರು ರೇಬಿಸ್ ಕುರಿತು ಜಾಗೃತಿ ಹೊಂದಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬೆಟಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಮಧುಮತಿ ಪಂಚಮುಖಿ ಮಾತನಾಡಿ, ಬೀದಿ ನಾಯಿಗಳಿಂದ ಮಕ್ಕಳು ಹಾಗೂ ಸಾರ್ವಜನಿಕರು ಅಂತರ ಕಾಯ್ದುಕೊಳ್ಳಬೇಕು. ನಾಯಿ, ಬೆಕ್ಕು ಸೇರಿದಂತೆ ಯಾವುದೇ ಪ್ರಾಣಿಯ ಕಡಿತವನ್ನು ಹಗುರವಾಗಿ ತೆಗೆದುಕೊಳ್ಳಬಾರದು. ರೇಬಿಸ್‌ನಿಂದಾಗುವ ಸಾವುಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿದ್ದು, ಇದಕ್ಕಾಗಿ ವಿವಿಧ ಇಲಾಖೆಗಳ ಸಹಭಾಗಿತ್ವ

> ರೇಬಿಸ್‌ನಿಂದಾಗುವ ಸಾವುಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯ. ಇದಕ್ಕಾಗಿ ಇತರ ಇಲಾಖೆಗಳ ಸಹಭಾಗಿತ್ವವೂ ಅಗತ್ಯ.
> – ಡಾ. ಮಧುಮತಿ ಪಂಚಮುಖಿ, ಆಡಳಿತ ವೈದ್ಯಾಧಿಕಾರಿ, ಬೆಟಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರ

ಅಗತ್ಯವಾಗಿದೆ ಎಂದರು.

ಆಶಾ ಕಾರ್ಯಕರ್ತೆ ಶಾಂತಾ ಹೊಟ್ಟಿ ಪ್ರಾರ್ಥಿಸಿದರು. ಬೆಟಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸುರಕ್ಷತಾಧಿಕಾರಿ ಯಾಸ್ಮಿನ್ ಬಾನು ವಡ್ಡಟ್ಟಿ ಸ್ವಾಗತಿಸಿದರು. ಶೃತಿ ಪವಾರ ಕಾರ್ಯಕ್ರಮ ನಿರೂಪಿಸಿದರು. ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಸ್ವಪ್ನಾ ಕೋಳುರ ವಂದಿಸಿದರು.

ಕಾರ್ಯಕ್ರಮದಲ್ಲಿ ಬೆಟಗೇರಿ ಭಾಗದ ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಕೂಲಿ ಕಾರ್ಮಿಕರಿಗೆ ಸಿಹಿಸುದ್ದಿ

# ಜಾಬ್ ಕಾರ್ಡ್ ಮೇಳಕ್ಕೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಮಾಗಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಕಸಿತ ಭಾರತ-ಗ್ಯಾರಂಟಿ ಫಾರ್ ರೋಜಗಾರ್‌ಆ್ಯಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆ (ವಿಬಿಜಿ ರಾಮ್ ಜಿ) ಅಡಿಯಲ್ಲಿ ಐಇಸಿ ಚಟುವಟಿಕೆ ಹಮ್ಮಿಕೊಂಡು ಕೂಲಿ ಕಾರ್ಮಿಕರಿಗೆ ಯೋಜನೆಯ ಕುರಿತು ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಐಇಸಿ ಸಂಯೋಜಕರು ಮಾತನಾಡಿ, ವಿಬಿಜಿ ರಾಮ್ ಜಿ ಯೋಜನೆಯಡಿ ಜಾಬ್ ಕಾರ್ಡ್ ಮೇಳ ಆಯೋಜಿಸಲಾಗಿದ್ದು, ಅರ್ಹ ಕೂಲಿ ಕಾರ್ಮಿಕರಿಗೆ ಹೊಸ ಜಾಬ್ ಕಾರ್ಡ್‌ಗಳನ್ನು ವಿತರಿಸಲಾಗುತ್ತಿದೆ. ಅರ್ಹ ಕಾರ್ಮಿಕರು ಯೋಜನೆಯ ಸೌಲಭ್ಯ ಪಡೆದುಕೊಂಡು ಸದುಪಯೋಗ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ತಾಲೂಕು ಐಇಸಿ ಸಂಯೋಜಕರು ಮಾತನಾಡಿ, ಯೋಜನೆಯಡಿ ಕೂಲಿ ದರವನ್ನು 370ರಿಂದ 382ಕ್ಕೆ ಹೆಚ್ಚಿಸಲಾಗಿದೆ. ಉದ್ಯೋಗದ ದಿನಗಳನ್ನೂ 100ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ಯೋಜನೆಯಡಿ ದೊರೆಯುವ ಉದ್ಯೋಗಾವಕಾಶಗಳು ಹಾಗೂ ವಿವಿಧ ಸೌಲಭ್ಯಗಳ ಕುರಿತು ಕೂಲಿ ಕಾರ್ಮಿಕರಿಗೆ ಸಮಗ್ರ ಮಾಹಿತಿ ನೀಡಲಾಯಿತು ಎಂದರು.

ಗ್ರಾಮೀಣ ಪ್ರದೇಶದ ಅರ್ಹ ಕೂಲಿ ಕಾರ್ಮಿಕರು ಯೋಜನೆಯ ಸೌಲಭ್ಯಗಳನ್ನು ಪಡೆದುಕೊಳ್ಳುವ ಮೂಲಕ ತಮ್ಮ ಜೀವನೋಪಾಯ ಸುಧಾರಿಸಿಕೊಳ್ಳಬೇಕು ಎಂದು ಅಧಿಕಾರಿಗಳು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ವಿಬಿಜಿ ರಾಮ್ ಜಿ ಸಿಬ್ಬಂದಿ, ಪಂಚಾಯಿತಿ ಸಿಬ್ಬಂದಿ ಹಾಗೂ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

## ಇಂದು 'ಉನ್ನತಿ 2026' ಉದ್ಯೋಗ ಮೇಳ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಉದ್ಯೋಗಾಕಾಂಕ್ಷಿ ಯುವಜನರಿಗೆ ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಯೋಗದಲ್ಲಿ 'ಉನ್ನತಿ 2026' ಉದ್ಯೋಗ ಮೇಳ ಸೆ. 30ರಂದು ಆಯೋಜಿಸಲಾಗಿದೆ.

ಗದಗದ ನಾಗಾವಿಯಲ್ಲಿರುವ ವಿಶ್ವವಿದ್ಯಾಲಯದ 'ಗ್ರಾಮ ಗಂಗೋತ್ರಿ' ಆವರಣದಲ್ಲಿ ಬೆಳಿಗ್ಗೆ 8.30ರಿಂದ ಉದ್ಯೋಗ ಮೇಳ ಆರಂಭವಾಗಲಿದೆ. ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರು ಉದ್ಯೋಗ ಮೇಳಕ್ಕೆ ಚಾಲನೆ ನೀಡಲಿದ್ದಾರೆ.

ಉದ್ಯೋಗ ಮೇಳದಲ್ಲಿ 40ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿದ್ದು, ವಿವಿಧ ಹುದ್ದೆಗಳಿಗೆ 5,000ಕ್ಕೂ ಅಧಿಕ ಉದ್ಯೋಗಾವಕಾಶಗಳು ಲಭ್ಯವಿರಲಿವೆ. ಬ್ಯಾಂಕಿಂಗ್, ಹಣಕಾಸು, ವಿಮೆ, ಶಿಕ್ಷಣ, ಗ್ರಾಮೀಣಾಭಿವೃದ್ಧಿ, ತಂತ್ರಜ್ಞಾನ, ಭೂ-ಸ್ಥಳಿಕ ಸೇವೆಗಳು, ಪ್ರವಾಸೋದ್ಯಮ, ಕೃಷಿ, ಆಹಾರ ಹಾಗೂ ಸಾಮಾಜಿಕ ಅಭಿವೃದ್ಧಿ ಸೇರಿದಂತೆ ವಿವಿಧ ಕ್ಷೇತ್ರಗಳ ಸಂಸ್ಥೆಗಳು ಭಾಗವಹಿಸಲಿವೆ.

ಗದಗ ಸೇರಿದಂತೆ ಬೆಂಗಳೂರು, ಹುಬ್ಬಳ್ಳಿ-ಧಾರವಾಡ, ಹಾವೇರಿ, ಹೈದರಾಬಾದ್, ನಾಗಪುರ, ಚಂಡೀಗಢ, ಹೊಸಪೇಟೆ, ಮುಧೋಳ ಸೇರಿದಂತೆ ವಿವಿಧ ಪ್ರದೇಶಗಳ ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲಿವೆ.

ಪಿಯುಸಿ, ಐಟಿಐ, ಡಿಪ್ಲೊಮಾ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ದಾಖಲೆಗಳ ಜೆರಾಕ್ಸ್ ಪ್ರತಿಗಳು ಹಾಗೂ ಸ್ವವಿವರವುಳ್ಳ ಜೀವನ ಚರಿತ್ರೆ (ಖಿಜಣಟಜ) ಪ್ರತಿಯನ್ನು ಕಡ್ಡಾಯವಾಗಿ ತರಬೇಕು.

ಉದ್ಯೋಗಾಕಾಂಕ್ಷಿಗಳು ನೀಡಿರುವ ಕಿಖ ಕೋಡ್ ಮೂಲಕ ಮುಂಗಡ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳ ಅನುಕೂಲಕ್ಕಾಗಿ ಗದಗದ ರೈತ ಭವನ (ಹಳೆ ಜಿಲ್ಲಾಧಿಕಾರಿ ಕಚೇರಿ)ದಿಂದ ಬೆಳಿಗ್ಗೆ 8.30ರಿಂದ ವಿಶ್ವವಿದ್ಯಾಲಯದ ಆವರಣಕ್ಕೆ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ.

ಜಿಲ್ಲೆಯ ಅರ್ಹ ಉದ್ಯೋಗಾಕಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ 'ಉನ್ನತಿ 2026' ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳುವಂತೆ ವಿಶ್ವವಿದ್ಯಾಲಯದ ಕುಲಪತಿ ಹಾಗೂ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 946 ವಿದ್ಯಾರ್ಥಿಗಳಿಗೆ 10 ಕೋಟಿ ಶಿಷ್ಯವೇತನ

# ಶಿಕ್ಷಣಕ್ಕೆ ಧರ್ಮಸ್ಥಳದ ನೆರವು



**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸುಜ್ಞಾನ ನಿಧಿ ಶಿಷ್ಯವೇತನ ಯೋಜನೆಯಡಿ ಗದಗ ಜಿಲ್ಲೆಯಲ್ಲಿ ಇದುವರೆಗೆ 946 ವಿದ್ಯಾರ್ಥಿಗಳಿಗೆ 10 ಕೋಟಿ ಶಿಷ್ಯವೇತನ ವಿತರಿಸಲಾಗಿದೆ ಎಂದು ಗದಗ ತಾಲೂಕು ಯೋಜನಾಧಿಕಾರಿ ಶ್ರೀಮತಿ ಉಮಾ ಹೇಳಿದರು.

ನಗರದ ಜಿಲ್ಲಾ ಕಚೇರಿಯಲ್ಲಿ 2025-26ನೇ ಸಾಲಿನಲ್ಲಿ ಆಯ್ಕೆಯಾದ 40 ವಿದ್ಯಾರ್ಥಿನಿಯರಿಗೆ ಶಿಷ್ಯವೇತನದ ಮಂಜೂರಾತಿ ಪತ್ರ ವಿತರಿಸಿ ಅವರು ಮಾತನಾಡಿದರು.

ಸುಜ್ಞಾನ ನಿಧಿ ಯೋಜನೆಯಡಿ ತಾಂತ್ರಿಕ ಹಾಗೂ ವೃತ್ತಿಪರ ಶಿಕ್ಷಣ ಪಡೆಯುವ ಅರ್ಹ ಸದಸ್ಯರ ಕುಟುಂಬದ ವಿದ್ಯಾರ್ಥಿಗಳಿಗೆ ನೆರವು ನೀಡಲಾಗುತ್ತಿದೆ. ರಾಜ್ಯಾದ್ಯಂತ ಇದುವರೆಗೆ 1,37,165 ವಿದ್ಯಾರ್ಥಿಗಳಿಗೆ 186 ಕೋಟಿ ಶಿಷ್ಯವೇತನ ವಿತರಿಸಲಾಗಿದೆ. ವಿದ್ಯಾರ್ಥಿಗಳು ಶಿಷ್ಯವೇತನವನ್ನು ಭವಿಷ್ಯದ ನಿಧಿಯಂತೆ ಪರಿಗಣಿಸಿ ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆದು ಕುಟುಂಬ ಹಾಗೂ ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಹೇಳಿದರು.

ರೈತ ಸಂಘದ ಅಧ್ಯಕ್ಷ ಪರಮೇಶಪ್ಪ ಜಂತ್ಲಿ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮಹಿಳೆಯರು, ಮಕ್ಕಳು, ವೃದ್ಧರು, ಅಂಗವಿಕಲರು, ವಿಧವೆಯರು, ರೈತರು ಸೇರಿದಂತೆ ವಿವಿಧ ವರ್ಗಗಳ ಜನರಿಗೆ ಹಲವು ಯೋಜನೆಗಳ ಮೂಲಕ ನೆರವಾಗುತ್ತಿದೆ ಎಂದರು.

ವಿಬಿಐ ನ್ಯೂಸ್ ಸಂಪಾದಕ ಹಾಗೂ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ವೆಂಕಟೇಶ ಇಮರಾಪೂರ ಮಾತನಾಡಿ, ಸಂಸ್ಥೆಯ ಯೋಜನೆಗಳು ಅನೇಕರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನೆರವಾಗಿವೆ. ವಿದ್ಯಾರ್ಥಿಗಳು ಶಿಷ್ಯವೇತನವನ್ನು

> ಶಿಷ್ಯವೇತನವನ್ನು ಭವಿಷ್ಯದ ನಿಧಿಯಂತೆ ಪರಿಗಣಿಸಿ ಸದುಪಯೋಗ ಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆದು ಕುಟುಂಬ ಹಾಗೂ ಸಮಾಜಕ್ಕೆ ಕೊಡುಗೆ ನೀಡಬೇಕು..
> – ಶ್ರೀಮತಿ ಉಮಾ, ತಾಲೂಕು ಯೋಜನಾಧಿಕಾರಿ

ಸದ್ವಿನಿಯೋಗಿಸಿಕೊಂಡು ಉನ್ನತ ಶಿಕ್ಷಣ ಪಡೆದು ಸಮಾಜಕ್ಕೆ ಕೊಡುಗೆ ನೀಡಬೇಕು ಎಂದರು.

ಪ್ರಗತಿಪರ ರೈತ ಫಕ್ಕೀರಪ್ಪ (ಮುತ್ತು) ಜಡಿ ಮಾತನಾಡಿ, ಯಾವುದೇ ಭೇದಭಾವವಿಲ್ಲದೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವುದು ಸಂಸ್ಥೆಯ ವಿಶೇಷತೆ ಎಂದರು.

## ಬರಗಾಲ ಕಾಮಗಾರಿ ಆರಂಭಿಸಲು

# ಒತ್ತಾಯಿಸಿ ಪ್ರತಿಭಟನೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಜಿಲ್ಲೆಯ ಉದ್ಯೋಗಾಕಾಂಕ್ಷಿ ಯತಾಲೂಕಿನಲ್ಲಿ ತೀವ್ರ ಬರಗಾಲ ಪರಿಸ್ಥಿತಿ ನಿರ್ಮಾಣವಾಗಿದ್ದು, ಕೂಡಲೇ ಬರಗಾಲ ಕಾಮಗಾರಿಗಳನ್ನು ಆರಂಭಿಸಬೇಕು ಎಂದು ಒತ್ತಾಯಿಸಿ ಸಿಪಿಐ(ಎಂ) ತಾಲೂಕು ಸಮಿತಿ ವತಿಯಿಂದ ಪಟ್ಟಣದ ಬಸವೇಶ್ವರ ವೃತ್ತದ ಬಳಿ ಪ್ರತಿಭಟನೆ ನಡೆಸಲಾಯಿತು.

ಮಳೆಯ ಕೊರತೆಯಿಂದ ಬಿತ್ತನೆ ಸಾಧ್ಯವಾಗದೆ, ಕೆಲವೆಡೆ ಬಿತ್ತನೆಯಾದ ಬೆಳೆಗಳೂ ಒಣಗಿ ನಷ್ಟವಾಗಿವೆ. ಪಂಪ್‌ಸೆಟ್‌ಗಳ ನೀರು ಬತ್ತುವ ಆತಂಕ ಎದುರಾಗಿದ್ದು, ಕೂಲಿ ಕೆಲಸಕ್ಕಾಗಿ ಜನರು ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನಾಕಾರರು ಹೇಳಿದರು.

ಮಹಿಳೆಯರು, ರೈತರು ಹಾಗೂ ಸಣ್ಣ ರೈತರ ಸಾಲ ಮನ್ನಾ ಮಾಡಬೇಕು. ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ ನೀಡಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಉದ್ಯೋಗದ ಕ್ರಿಯಾ ಯೋಜನೆ ರೂಪಿಸಿ, ಉದ್ಯೋಗ ಖಾತ್ರಿ ಯೋಜನೆಯಡಿ 200 ದಿನಗಳ ಕೆಲಸ ಹಾಗೂ ದಿನಕ್ಕೆ 500 ಕೂಲಿ ನೀಡಬೇಕು ಎಂದು ಆಗ್ರಹಿಸಿದರು.

ವಿಧವಾ, ವೃದ್ಧಾಪ್ಯ ಹಾಗೂ ದೇವದಾಸಿ ಮಹಿಳೆಯರ ಬಾಕಿ ಪಿಂಚಣಿ ಕೂಡಲೇ ಬಿಡುಗಡೆ ಮಾಡಬೇಕು. ಪಡಿತರ ಕಾರ್ಡ್‌ದಾರರಿಗೆ ಅಗತ್ಯ ವಸ್ತುಗಳನ್ನು ಉಚಿತವಾಗಿ ವಿತರಿಸಬೇಕು ಎಂದು ಒತ್ತಾಯಿಸಿದರು.

ಹಗರಿಬೊಮ್ಮನಹಳ್ಳಿ ರಾಮನಗರದ ಶ್ರೀ ಈಶ್ವರ ದೇವಸ್ಥಾನದಿಂದ ಬಸವೇಶ್ವರ ವೃತ್ತದವರೆಗೆ ಮೆರವಣಿಗೆ ನಡೆಸಿ, ಬಳಿಕ ಉಪತಹಸೀಲ್ದಾರ್ ಶಿವಕುಮಾರ್ ಗೌಡ್ರು ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವವನ್ನು ಬಿ. ಮಾಳಮ್ಮ ವಹಿಸಿದ್ದರು. ಜಿಲ್ಲಾ ಮುಖಂಡರಾದ ಆರ್.ಎಸ್. ಬಸವರಾಜ್, ಎಸ್. ಜಗನ್ನಾಥ, ಕೆ. ರಮೇಶ್, ಕೆ. ಅಂಜೀನಮ್ಮ, ಪಿ. ಚಾಂದಬಿ, ತಿಮ್ಮಕ್ಕ, ಗುರುಶಾಂತಮ್ಮ, ದೊಡ್ಡಬಸಮ್ಮ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಅ. 2ರಂದು ಗಾಂಧಿ-ಶಾಸ್ತ್ರಿ ಜಯಂತಿ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಕರ್ನಾಟಕ ರಾಜ್ಯೋತ್ಸವ ಸಮಿತಿ ಬೆಟಗೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆ ಹಾಗೂ ಸಾರ್ವಜನಿಕರ ಸಹಯೋಗದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಅ. 2ರಂದು ಬೆಳಗ್ಗೆ 8.30ಕ್ಕೆ ಬೆಟಗೇರಿ ಹೊಸಪೇಟೆ ಚೌಕದಲ್ಲಿರುವ ಗಾಂಧಿ ಗುಡಿ ಆವರಣದಲ್ಲಿ ಆಚರಿಸಲಾಗುವುದು.

ಕಾರ್ಯಕ್ರಮದ ಅಂಗವಾಗಿ ಶ್ರೀ ಮಳಲಿ ಹಾಗೂ ಸಂಗಡಿಗರಿಂದ ಪ್ರಾರ್ಥನಾ ಸಭೆ ಮತ್ತು ವಿದ್ಯಾರ್ಥಿಗಳಿಂದ ಸರ್ವಧರ್ಮ ಗ್ರಂಥ ಪಠಣ ನಡೆಯಲಿದೆ.

ಮುಖ್ಯ ಅತಿಥಿಗಳಾಗಿ ಗದಗ ಶಾಸಕ ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್. ಸೇರಿದಂತೆ ಬೆಟಗೇರಿ ಭಾಗದ ನಗರಸಭಾ ಸದಸ್ಯರು, ಡಿಡಿಪಿಐ ಆರ್.ಎಸ್. ಬುರಡಿ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟಪ್ಪನವರ ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ಬೆಟಗೇರಿಯ ಎಲ್ಲ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು, ಸಿಬ್ಬಂದಿ, ಸಮಿತಿ ಸದಸ್ಯರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಗಣೇಶಸಿಂಗ್ ಬ್ಯಾಳಿ ಮನವಿ ಮಾಡಿದ್ದಾರೆ.

## ವಚನ ಸಾಹಿತ್ಯದ ವೈಜ್ಞಾನಿಕ ಅಧ್ಯಯನಕ್ಕೆ 'ಸಂಗಮ ಸಿರಿ' ಗೌರವ

**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಹಿರಿಯ ಸಾಹಿತಿ ಡಾ. ಸಂಗಮೇಶ ಹಂಡಿಗಿ ಅವರ ಸ್ಮರಣಾರ್ಥ ಕಳೆದ ಐದು ವರ್ಷಗಳಿಂದ ನೀಡಲಾಗುತ್ತಿರುವ 'ಸಂಗಮ ಸಿರಿ' ರಾಜ್ಯ ಮಟ್ಟದ ಪ್ರಶಸ್ತಿಗೆ ಈ ಬಾರಿ ವಚನ ಸಾಹಿತ್ಯ ಸಂಶೋಧಕ, ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯ ಡಾ. ದಯಾನಂದ ನೂಲಿ ಅವರನ್ನು ಆಯ್ಕೆ ಮಾಡಲಾಗಿದೆ.

ವಚನ ಸಾಹಿತ್ಯವನ್ನು ವೈಜ್ಞಾನಿಕ ದೃಷ್ಟಿಕೋನದಿಂದ ಅಧ್ಯಯನ ಮಾಡಿರುವ ಹಿನ್ನೆಲೆಯಲ್ಲಿ ಡಾ. ನೂಲಿ ಅವರ ಸಂಶೋಧನಾ ಕಾರ್ಯವನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪ್ರಶಸ್ತಿಯು 10 ಸಾವಿರ ನಗದು ಹಾಗೂ ಪ್ರಶಸ್ತಿ ಫಲಕ ಒಳಗೊಂಡಿದೆ. ನವೆಂಬರ್‌ನಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಡಾ. ಸಂಗಮೇಶ ಹಂಡಿಗಿ ಸಾಹಿತ್ಯ ಪ್ರತಿಷ್ಠಾನದ ಪದಾಧಿಕಾರಿಗಳು ತಿಳಿಸಿದ್ದಾರೆ.

ಮೂಲತಃ ವೈದ್ಯಕೀಯ ಕ್ಷೇತ್ರದಲ್ಲಿ ಶಸ್ತ್ರಚಿಕಿತ್ಸಕರಾಗಿ ಸೇವೆ ಸಲ್ಲಿಸುತ್ತಿರುವ ಡಾ. ದಯಾನಂದ ನೂಲಿ ಅವರು ಸಾಹಿತ್ಯ ಕ್ಷೇತ್ರದಲ್ಲೂ ಗಮನಾರ್ಹ ಕೊಡುಗೆ ನೀಡಿದ್ದಾರೆ. 'ಶರಣರ ಶಿವಯೋಗ' ಕೃತಿಯಲ್ಲಿ ವಚನಗಳನ್ನು ವೈಜ್ಞಾನಿಕ ಹಿನ್ನೆಲೆಯಲ್ಲಿ ಅಧ್ಯಯನ ಮಾಡಿದ್ದಾರೆ. ಅವರ 'ವಚನಗಳಲ್ಲಿ ಆರೋಗ್ಯಕರ ಪರಿಕಲ್ಪನೆ' ಹಾಗೂ 'ಮರುಳ ಶಂಕರ ದೇವರು ಅನುಭವ ಯಾತ್ರೆ' ಕೃತಿಗಳು ಕೂಡ ವಚನಗಳ ವೈಜ್ಞಾನಿಕ ಅಧ್ಯಯನದ ದೃಷ್ಟಿಯಿಂದ ಗಮನ ಸೆಳೆದಿವೆ.

ಡಾ. ಪ್ರಭಾಕರ ಕೋರೆ ಅವರ ಕುರಿತು 'ಪ್ರಭಾಂಕಲಿ' ಹಾಗೂ 'ನೆಹಲ್' ಎಂಬ ಕಥಾ ಸಂಕಲನಗಳನ್ನು ಹೊರತಂದಿದ್ದಾರೆ.

## ಸಣ್ಣ ಸುದ್ದಿಗಳು

### ಶಿವಾನುಭವಗೋಷ್ಠಿಯಲ್ಲಿ ಇಂದು ವಿಚಾರ ಮಂಥನ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಅಕ್ಷರ ಭಾರತ ಪ್ರತಿಷ್ಠಾನ, ಗದಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ, ನರೇಗಲ್ಲ ಇವರ ಸಹಯೋಗದಲ್ಲಿ ಶಿವಾನುಭವಗೋಷ್ಠಿ 77 ಕಾರ್ಯಕ್ರಮ ಸೆ.30ರಂದು ಸಂಜೆ 6.30ಕ್ಕೆ ನರೇಗಲ್ಲದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ನಡೆಯಲಿದೆ.

ಪರಮಪೂಜ್ಯ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಎಸ್.ಎ.ವಿ.ವಿ.ಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಅವರು ಮುಖ್ಯ ಉಪನ್ಯಾಸಕರಾಗಿ 'ಗಾಂಧೀಜಿ ಮತ್ತು ಶಿಕ್ಷಣ' ವಿಷಯ ಕುರಿತು ವಿಚಾರ ಮಂಡಿಸಲಿದ್ದಾರೆ.

ಗಾಂಧೀಜಿಯವರ ಶಿಕ್ಷಣ ಚಿಂತನೆ, ಶಿಕ್ಷಣದ ಉದ್ದೇಶ ಹಾಗೂ ಸಮಾಜ ನಿರ್ಮಾಣದಲ್ಲಿ ಶಿಕ್ಷಣದ ಪಾತ್ರ ಕುರಿತು ಕಾರ್ಯಕ್ರಮದಲ್ಲಿ ವಿಚಾರ ಮಂಥನ ನಡೆಯಲಿದೆ.

ಸದ್ಭಕ್ತರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಶಿಕ್ಷಣಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಆಯೋಜಕರು ಮನವಿ ಮಾಡಿದ್ದಾರೆ.

### ಮಲ್ಲಪ್ಪ ಮಡಿವಾಳರಿಗೆ ರಾಜ್ಯಮಟ್ಟದ 'ಪುಟ್ಟರಾಜ ಪ್ರಶಸ್ತಿ'

ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ಜಿಲ್ಲಾ ಕವಿ ಸಂಘದ ಪ್ರಥಮ ವಾರ್ಷಿಕೋತ್ಸವ, ಕವಿ ಸಮ್ಮೇಳನ ಹಾಗೂ ಸಾಧಕ-



ರಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗದಗ ತಾಲೂಕಿನ ತಿಮ್ಮಾಪೂರ ಗ್ರಾಮದ ಸಂಗೀತ ಕ್ಷೇತ್ರದ ಸಾಧಕ ಮಲ್ಲಪ್ಪ ನೀಲಪ್ಪ ಮಡಿವಾಳರ ಅವರಿಗೆ ರಾಜ್ಯಮಟ್ಟದ 'ಪುಟ್ಟರಾಜ ಪ್ರಶಸ್ತಿ' ಪ್ರದಾನ ಮಾಡಲಾಗುತ್ತಿದೆ.

ಕರ್ನಾಟಕ ರಾಜ್ಯ ನಾಟಕ ಬರಹಗಾರರ ಹಾಗೂ ಕವಿಗಳ ಸಂಘ, ಬೆಂಗಳೂರು ಮತ್ತು ಧಾರವಾಡ ಜಿಲ್ಲಾ ಶಾಖೆಯ ಸಂಯುಕ್ತ ಆಶ್ರಯದಲ್ಲಿ ನಡೆಯಲಿರುವ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಸಾಧಕರನ್ನು ಗುರುತಿಸಿ ಗೌರವಿಸಲಾಗುತ್ತಿದೆ. ಸಂಗೀತ ಕ್ಷೇತ್ರದಲ್ಲಿ ಮಲ್ಲಪ್ಪ ಮಡಿವಾಳರ ಅವರ ಸೇವೆಯನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಅ. 4ರಂದು ನವಲಗುಂದ ತಾಲೂಕಿನ ಶಿರಕೋಳ ಗ್ರಾಮದ ಶ್ರೀ ಸಿದ್ಧಾರೂಢ ಸಿದ್ಧಾಶ್ರಮದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಮಲ್ಲಪ್ಪ ಮಡಿವಾಳರ ಅವರಿಗೆ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, ತಿಮ್ಮಾಪೂರ ಗ್ರಾಮದ ಶ್ರೀ ಲಕ್ಷ್ಮೀನಾರಾಯಣ ಭಜನಾ ಸಂಘದ ಸದಸ್ಯರು, ನಾಟಕ ಕಲಾವಿದರು ಹಾಗೂ ಗುರುಹಿರಿಯರು ಅಭಿನಂದನೆ ಸಲ್ಲಿಸಿ, ಮುಂದಿನ ದಿನಗಳಲ್ಲಿಯೂ ಅವರ ಸೇವೆ ನಿರಂತರವಾಗಿ ಸಾಗಲಿ ಎಂದು ಶುಭ ಹಾರೈಸಿದ್ದಾರೆ.

### ಸಮಾಜಮುಖಿ ಕಾರ್ಯಗಳಿಗೆ ವಿದ್ಯಾರ್ಥಿಗಳು ಮುಂದಾಗಲಿ



ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಸೇವಾ ಯೋಜನೆ ಕೇವಲ ಸ್ವಚ್ಛತಾ ಕಾರ್ಯಗಳಿಗೆ ಸೀಮಿತವಾಗಿಲ್ಲ. ವಿದ್ಯಾರ್ಥಿಗಳಲ್ಲಿ ಸಮಾಜಮುಖಿ ಚಿಂತನೆ ಹಾಗೂ ವೈಯಕ್ತಿಕ ಸಾಧನೆಯ ಮನೋಭಾವ ಬೆಳೆಸುವ ವೇದಿಕೆಯಾಗಿದೆ ಎಂದು ರಾಜ್ಯ ಪ್ರಶಸ್ತಿ ಪುರಸ್ಕೃತ ಶಿವಯೋಗಿ ಹಾವೇರಿ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಎನ್‌ಎಸ್‌ಎಸ್ ಗೀತೆ, ಶಿಬಿರಗಳು, ಚಟುವಟಿಕೆಗಳು ಹಾಗೂ ವಿವಿಧ ಹಂತಗಳಲ್ಲಿ ನೀಡಲಾಗುವ ಎನ್‌ಎಸ್‌ಎಸ್ ಪುರಸ್ಕಾರಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಶಿವಪ್ಪ ಎಂ. ಕುರಿ ಮಾತನಾಡಿ, ಗಾಂಧೀಜಿ ಅವರ 100ನೇ ಜನ್ಮದಿನದ ಅಂಗವಾಗಿ ಆರಂಭಗೊಂಡ ರಾಷ್ಟ್ರೀಯ ಸೇವಾ ಯೋಜನೆ ದೇಶದಾದ್ಯಂತ ಯುವಕರನ್ನು ಸಮಾಜಮುಖಿಯಾಗಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದರು.

ಹಿರಿಯ ಪ್ರಾಧ್ಯಾಪಕಿ ಸುನಿತಾ ಜೋಗ ಹಾಗೂ ಉದ್ಯೋಗ ಭರವಸೆ ಕೋಶದ ಸಂಚಾಲಕ ಮಹಾಂತೇಶ ಮುಧೋಳ ಕಾರ್ಯಕ್ರಮ ಉದ್ಘಾಟಿಸಿದರು. ಎನ್‌ಎಸ್‌ಎಸ್ ಘಟಕ 1ರ ಕಾರ್ಯಕ್ರಮಾಧಿಕಾರಿ ಕವಿತಾ ಜಂಗವಾಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಘಟಕ 2ರ ಕಾರ್ಯಕ್ರಮಾಧಿಕಾರಿ ಡಾ. ಮಹಾದೇವ ವಡೇಕಾರ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಎನ್‌ಎಸ್‌ಎಸ್ ಸ್ವಯಂಸೇವಕರು ಪಾಲ್ಗೊಂಡಿದ್ದರು.

### ಜ್ಞಾನ, ಸಂಸ್ಕಾರದಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯ: ಸಚಿವ ಬಸವಂತಪ್ಪ

# ಧರ್ಮದ ಜತೆಗೆ ಶಿಕ್ಷಣಕ್ಕೂ ಆದ್ಯತೆ ನೀಡಿ



ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಧಾರ್ಮಿಕ ಆಚರಣೆಗಳು ಜೀವನದ ಮೌಲ್ಯಗಳನ್ನು ಬೆಳೆಸುತ್ತವೆ. ಇದರ ಜತೆಗೆ ಶಿಕ್ಷಣಕ್ಕೂ ಸಮಾನ ಆದ್ಯತೆ ನೀಡಬೇಕು. ಶಿಕ್ಷಣದ ಮೂಲಕವೇ ವ್ಯಕ್ತಿ, ಕುಟುಂಬ ಹಾಗೂ ಸಮಾಜದ ಭವಿಷ್ಯ ಬದಲಾಗಲು ಸಾಧ್ಯ ಎಂದು ಮುಜರಾಯಿ, ಮೀನುಗಾರಿಕೆ ಹಾಗೂ ಒಳನಾಡು ಜಲಸಾರಿಗೆ ಸಚಿವ ಕೆ.ಎಸ್. ಬಸವಂತಪ್ಪ ಹೇಳಿದರು.

ಶಿರಹಟ್ಟಿ ತಾಲೂಕಿನ ಛಬ್ಬಿ ಗ್ರಾಮದ ಡಾ. ಬಿ.ಆರ್. ಅಂಬೇಡ್ಕರ್ ನಗರದಲ್ಲಿ ಸೋಮವಾರ ತಡರಾತ್ರಿ ನಡೆದ ಶ್ರೀ ದುರ್ಗಾದೇವಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಜಾತ್ರಾಮಹೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು.

ದೇವಸ್ಥಾನಗಳು ಹಾಗೂ ಮಠ-ಮಾನ್ಯಗಳು ಸಮಾಜದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಆದರೆ ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ಹಾಗೂ ಮೌಲ್ಯಗಳನ್ನು ನೀಡುವುದು ಪ್ರತಿಯೊಬ್ಬ ಪಾಲಕರ ಜವಾಬ್ದಾರಿಯಾಗಿದೆ. ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಮಕ್ಕಳನ್ನು ಶಾಲೆಗೆ ಕಳುಹಿಸುವುದರ ಜತೆಗೆ ಅವರಲ್ಲಿ ಮಾನವೀಯತೆ, ಶಿಸ್ತು, ಸೇವಾ ಮನೋಭಾವ ಹಾಗೂ ಉತ್ತಮ ಸಂಸ್ಕಾರಗಳನ್ನು ಬೆಳೆಸಬೇಕು. ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿಯೊಂದಿಗೆ ಸಾಮಾಜಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳಿಗೂ ಉತ್ತೇಜನ ನೀಡಬೇಕು. ಹಿಂದುಳಿದ ಹಾಗೂ ಶ್ರಮಿಕ ಸಮುದಾಯಗಳ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂದು ಹೇಳಿದರು.

ಪೋಷಕರು ಮಕ್ಕಳ ಶಿಕ್ಷಣದ ಬಗ್ಗೆ ನಿರ್ಲಕ್ಷ್ಯ ವಹಿಸದೆ, ಉನ್ನತ ಶಿಕ್ಷಣ ಪಡೆಯಲು ಪ್ರೋತ್ಸಾಹಿಸಬೇಕು. ಶಿಕ್ಷಣದ ಮೂಲಕ ಸಾಮಾಜಿಕ ಹಾಗೂ ಆರ್ಥಿಕ ಸ್ವಾವಲಂಬನೆ ಸಾಧಿಸಲು ಸಾಧ್ಯ. ಧಾರ್ಮಿಕ ಆಚರಣೆಗಳ ಜತೆಗೆ ಸಾಮಾಜಿಕ ಸೇವೆ ಮತ್ತು ಶಿಕ್ಷಣಕ್ಕೆ ಒತ್ತು ನೀಡುವ ಅಗತ್ಯವಿದೆ ಎಂದರು.

ಕ್ಷೇತ್ರದ ಶಾಸಕರೂ ಸೇರಿದಂತೆ ಮುಖಂಡರು ದೇವಸ್ಥಾನ ಹಾಗೂ ಮಠಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಬೇಡಿಕೆ ಸಲ್ಲಿಸಿದ್ದಾರೆ. ಹಂತ ಹಂತವಾಗಿ ಅನುದಾನ ನೀಡಲಾಗುವುದು ಎಂದು ಸಚಿವ ಬಸವಂತಪ್ಪ ತಿಳಿಸಿದರು.

**ಸೇವೆಯಿಂದಲೇ ಜನರ ವಿಶ್ವಾಸ ಗಳಿಸಲು ಸಾಧ್ಯ**

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ನಿಸ್ವಾರ್ಥ ಸೇವೆಯಿಂದ ಸರ್ವಜನಾಂಗದ ವಿಶ್ವಾಸ ಗಳಿಸಲು ಸಾಧ್ಯ ಎಂಬುದಕ್ಕೆ ಸಚಿವ ಕೆ.ಎಸ್. ಬಸವಂತಪ್ಪ ಅವರೇ ನಿದರ್ಶನ ಎಂದರು. ತಾಲೂಕಿನಲ್ಲಿ ಎಲ್ಲ ಸಮುದಾಯಗಳ ದೇವಸ್ಥಾನಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಸಚಿವರಲ್ಲಿ ಮನವಿ ಮಾಡಿದರು.

> ಶಿಕ್ಷಣವು ವ್ಯಕ್ತಿಯ ಬದುಕಿನ ಜತೆಗೆ ಕುಟುಂಬ ಹಾಗೂ ಸಮಾಜದ ಭವಿಷ್ಯವನ್ನೂ ಬದಲಾಯಿಸುವ ಶಕ್ತಿ ಹೊಂದಿದೆ. ಮಕ್ಕಳಿಗೆ ಶಿಕ್ಷಣದ ಜತೆಗೆ ಮಾನವೀಯತೆ, ಶಿಸ್ತು, ಸೇವಾ ಮನೋಭಾವ ಹಾಗೂ ಉತ್ತಮ ಸಂಸ್ಕಾರಗಳನ್ನು ಬೆಳೆಸಬೇಕು.
> – ಬಸವಂತಪ್ಪ, ಸಚಿವ

ಸಾನಿಧ್ಯ ವಹಿಸಿದ್ದ ಶಿರಹಟ್ಟಿಯ ಜಗದ್ಗುರು ಫಕೀರೇಶ್ವರ ಸಂಸ್ಥಾನ ಮಠದ ಉತ್ತರಾಧಿಕಾರಿ ಜ.ಫ. ದಿಂಗಾಲೇಶ್ವರ ಸ್ವಾಮೀಜಿ ಮಾತನಾಡಿ, ಜನರ ಸೇವೆ ಮಾಡಿದರೆ ಅಧಿಕಾರಗಳು ನಮ್ಮನ್ನು ಹುಡುಕಿಕೊಂಡು ಬರುತ್ತವೆ ಎಂಬುದಕ್ಕೆ ಸಚಿವ ಬಸವಂತಪ್ಪ ಸಾಕ್ಷಿಯಾಗಿದ್ದಾರೆ. ಅವರು ಅಪರೂಪದ ರಾಜಕಾರಣಿ ಎಂದರು.

ವರವಿಯ ಮೌನೇಶ್ವರ ಸ್ವಾಮೀಜಿ ಆಶೀರ್ವಚನ ನೀಡಿದರು. ಮಾಜಿ ಶಾಸಕ ರಾಮಣ್ಣ ಲಮಾಣಿ, ಆನಂದಸ್ವಾಮಿ ಗಡ್ಡದ್ದೇವಮಠ, ಗುರುನಾಥ ದಾನಪ್ಪನವರ, ಎಸ್.ಎನ್. ಬಳ್ಳಾರಿ, ಫಕ್ಕೀರೇಶ ಮ್ಯಾಟಣ್ಣವರ, ಡಿ.ಕೆ. ಹೊನ್ನಪ್ಪನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಎಸ್‌ಐಆರ್ ನಿಲ್ಲಿಸಿ, ತಪ್ಪಾಗಿ ಕೈಬಿಟ್ಟ ಮತದಾರರ ಹಕ್ಕು ಮರುಸ್ಥಾಪಿಸಲು ಒತ್ತಾಯ

## ಮುಖ್ಯ ಚುನಾವಣಾ ಆಯುಕ್ತರ ವಜಾಕ್ಕೆ ಸಿಪಿಐ ಆಗ್ರಹ




> ಈ ವಿಷಯ ಎಸ್‌ಐಆರ್ ಅನ್ನು ಮೀರಿ ಬಹಳ ದೂರ ಹೋಗುತ್ತದೆ. ಇದು ಚುನಾವಣಾ ಆಯೋಗದ ಪಾರದರ್ಶಕತೆ ಮತ್ತು ಪ್ರಜಾಸತ್ತಾತ್ಮಕ ಕಾರ್ಯನಿರ್ವಹಣೆ ಹಾಗೂ ಸಾರ್ವತ್ರಿಕ ವಯಸ್ಕ ಮತದಾನದ ಮೂಲಭೂತ ಪ್ರಜಾಸತ್ತಾತ್ಮಕ ತತ್ವದ ರಕ್ಷಣೆಗೆ ಸಂಬಂಧಿಸಿದೆ.
> – ಕೆ. ಗಂಗಾಧರ, ಸಿಪಿಐ ತಾಲೂಕು ಕಾರ್ಯದರ್ಶಿ

ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ನಿಲ್ಲಿಸಿ, ಮತದಾರರ ಪಟ್ಟಿಯಿಂದ ತಪ್ಪಾಗಿ ಹೊರಗಿಡಲಾದವರ ಮತದಾನ ಹಕ್ಕುಗಳನ್ನು ಮರುಸ್ಥಾಪಿಸಬೇಕು ಎಂದು ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಸಿಪಿಐ) ವತಿಯಿಂದ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆ ಉದ್ದೇಶಿಸಿ ಸಿಪಿಐ ಜಿಲ್ಲಾ ಕಾರ್ಯದರ್ಶಿ ಹೆಚ್.ಎಂ. ಸಂತೋಷ್ ಮಾತನಾಡಿ, ಚುನಾವಣಾ ಆಯೋಗದ ಕಾರ್ಯನಿರ್ವಹಣೆ ಹಾಗೂ ಎಸ್‌ಐಆರ್ ಕುರಿತು ಹಲವು ಗಂಭೀರ ಪ್ರಶ್ನೆಗಳು ಎದುರಾಗಿವೆ. ಚುನಾವಣಾ ಆಯೋಗದ ವಿಶ್ವಾಸಾರ್ಹತೆ ಮತ್ತು ಸ್ವತಂತ್ರ ಕಾರ್ಯನಿರ್ವಹಣೆಯನ್ನು ಕಾಪಾಡುವ ಅಗತ್ಯವಿದೆ ಎಂದು ಹೇಳಿದರು.

ಮೂವರು ಚುನಾವಣಾ ಆಯುಕ್ತರಲ್ಲಿ ಇಬ್ಬರು ಮತದಾರರ ನೋಂದಣಿ, ಹೆಸರುಗಳ ಅಳಿಸುವಿಕೆ ಮತ್ತು ಮರುಸ್ಥಾಪನೆ ಹಾಗೂ ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ನಿರ್ಧಾರಗಳ ಕುರಿತು ಆಕ್ಷೇಪ ವ್ಯಕ್ತಪಡಿಸಿರುವುದಾಗಿ ವರದಿಯಾಗಿದೆ. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಸಮಗ್ರ ಪರಿಶೀಲನೆ ಅಗತ್ಯ ಎಂದು ಅವರು ಆಗ್ರಹಿಸಿದರು.

ಸಿಪಿಐ ಮುಖಂಡ ಅನ್ವರ್ ಭಾಷ ಮಾತನಾಡಿ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಅಧಿಕಾರದಿಂದ ವಜಾಗೊಳಿಸಬೇಕು. ಎಸ್‌ಐಆರ್ ಪ್ರಕ್ರಿಯೆ ನಿಲ್ಲಿಸಿ, ಮತದಾರರ ಪಟ್ಟಿಯಿಂದ ತಪ್ಪಾಗಿ ಹೊರಗಿಡಲಾದ ಎಲ್ಲರ ಮತದಾನ ಹಕ್ಕುಗಳನ್ನು ಮರುಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

ಚುನಾವಣಾ ಆಯೋಗದ ಸ್ವತಂತ್ರ ಹಾಗೂ ಪ್ರಜಾಸತ್ತಾತ್ಮಕ ಕಾರ್ಯನಿರ್ವಹಣೆಯನ್ನು ಮರುಸ್ಥಾಪಿಸಬೇಕು. ಚುನಾವಣಾ ಆಯುಕ್ತರ ನೇಮಕಾತಿ ವ್ಯವಸ್ಥೆಯಲ್ಲಿ ಬದಲಾವಣೆ ತರಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಸಿಪಿಐ ತಾಲೂಕು ಕಾರ್ಯದರ್ಶಿ ಕೆ. ಗಂಗಾಧರ, ಅಂಜಿನಪ್ಪ, ದೊಡ್ಡ ಮಲ್ಲೇಶಣ್ಣ, ಮುದಿಯಪ್ಪ, ಶಿವು, ವಿಜಯಮ್ಮ, ಲಲಿತಮ್ಮ, ಚಂದ್ರು, ನಾಗರಾಜ, ಮಂಜುನಾಥ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಮಹಾಸಭಾ ಸಭೆಯಲ್ಲಿ ಮಹತ್ವದ ನಿರ್ಧಾರ

## ಸಮುದಾಯ ಭವನ ಕಾಮಗಾರಿಗೆ ವೇಗ



ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಗದಗ ಜಿಲ್ಲಾ ಘಟಕದ ಮಾಸಿಕ ಸಭೆ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಅನುಷ್ಠಾನ, ಬಾಕಿ ಉಳಿದಿರುವ ಕಾರ್ಯಗಳ ಪೂರ್ಣಗೊಳಿಸುವಿಕೆ ಹಾಗೂ ಸಂಘಟನಾ ಚಟುವಟಿಕೆಗಳ ಕುರಿತು ಚರ್ಚಿಸಲಾಯಿತು. ಕಾರ್ಯಕಾರಿ ಮಂಡಳಿಯ ಎಲ್ಲ ಸದಸ್ಯರು ಸಭೆಗಳಿಗೆ ಸಕ್ರಿಯವಾಗಿ ಭಾಗವಹಿಸಿ ಸಂಘಟನೆಯ ಕಾರ್ಯಚಟುವಟಿಕೆಗಳನ್ನು ಬಲಪಡಿಸಬೇಕು ಎಂದು ಸೂಚಿಸಲಾಯಿತು.

ಜಿಲ್ಲಾ ಘಟಕದ ಸಮುದಾಯ ಭವನ ನಿರ್ಮಾಣ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವ ಕುರಿತು ಸಭೆಯಲ್ಲಿ ವಿಶೇಷವಾಗಿ ಚರ್ಚೆ ನಡೆಯಿತು. ಕಾಮಗಾರಿಗೆ ವೇಗ ನೀಡಿ, ಬಾಕಿ ಪ್ರಕ್ರಿಯೆಗಳನ್ನು ಶೀಘ್ರ ಪೂರ್ಣಗೊಳಿಸಿ ಭವನ ನಿರ್ಮಾಣ ಕಾರ್ಯವನ್ನು ಆದ್ಯತೆಯ ಮೇರೆಗೆ ಕೈಗೊಳ್ಳಲು ನಿರ್ಧರಿಸಲಾಯಿತು.

ಸಂಘಟನೆಯ ಬೆಳವಣಿಗೆ, ಸದಸ್ಯರ ಸಕ್ರಿಯ ಪಾಲ್ಗೊಳ್ಳುವಿಕೆ ಹಾಗೂ ಪರಸ್ಪರ ಸಮನ್ವಯ ಹೆಚ್ಚಿಸುವ ಕುರಿತು ಸಭೆಯಲ್ಲಿ ಅಭಿಪ್ರಾಯಗಳನ್ನು ಹಂಚಿಕೊಳ್ಳಲಾಯಿತು.

ಸಭೆಯಲ್ಲಿ ಮುರುಗೇಶ್ ಬಡ್ನಿ, ಚೆನ್ನವೀರಪ್ಪ ಹುಣಸಿಕಟ್ಟಿ, ನಾರಾಯಣಪುರ, ಶ್ರೀಶೈಲಪ್ಪ ಚಳಗೇರಿ, ಪಟ್ಟಣಶೆಟ್ಟಿ, ವಿಜಯಲಕ್ಷ್ಮಿ ಮಾನ್ವಿ, ಜಯಶ್ರೀ ಉಗಲಾಟ, ಉಮಾ ಕಾತರಕಿ, ವಿದ್ಯಾವತಿ ಗಡಗಿ, ಮೋಹನ್ ಕೋಟಿ, ಜೀವನಗೌಡ್ರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಐದು ದಶಕಗಳ ಸೇವೆಗೆ ಸಂಸ್ಥಾಪಕರ ಸ್ಮರಣೆ

## ವ್ಯಾಪಾರಸ್ಥರ ಸಮಸ್ಯೆಗೆ ಚೇಂಬರ್ ಸ್ಪಂದನೆ



ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ವಾರ್ಷಿಕ ಸರ್ವಸಾಧಾರಣ ಸಭೆ ಹಾಗೂ ಸಂಸ್ಥಾಪಕ ಶಾ. ಕುಶಲದಾಸ ಮೆಹತಾ ಅವರ ದಿನಾಚರಣೆ ಸೆ. 24ರಂದು ಸಂಸ್ಥೆಯ ಸಭಾಭವನದಲ್ಲಿ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಮಾತನಾಡಿ, ಕಳೆದ ಒಂದು ವರ್ಷದಲ್ಲಿ ಮಾಜಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಸಹಕಾರದೊಂದಿಗೆ ಉದ್ಯೋಗ ಮೇಳ, ದತ್ತಿ ಉಪನ್ಯಾಸ, ಜಿಎಸ್‌ಟಿ ಕುರಿತ ಕಾರ್ಯಕ್ರಮ ಸೇರಿದಂತೆ ಹಲವು ಚಟುವಟಿಕೆಗಳನ್ನು ಆಯೋಜಿಸಲಾಗಿದೆ ಎಂದರು.

ಎಪಿಎಂಸಿ ಖರೀದಿದಾರರು, ವರ್ತಕರು, ದಲಾಲರು ಹಾಗೂ ವ್ಯಾಪಾರಸ್ಥರು ಎದುರಿಸುತ್ತಿದ್ದ ಸಮಸ್ಯೆಗಳ ಕುರಿತು ಸಂಬಂಧಿಸಿದ ಅಧಿಕಾರಿಗಳು ಹಾಗೂ ಸರ್ಕಾರದ ಗಮನ ಸೆಳೆದು ಪರಿಹಾರ ಕಲ್ಪಿಸಲು ಸಂಸ್ಥೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದೆ ಎಂದು ತಿಳಿಸಿದರು.

ಮಾಜಿ ಅಧ್ಯಕ್ಷ ಚಂದ್ರು ಬಾಳಿಹಳ್ಳಿಮಠ ಮಾತನಾಡಿ, 1975ರಲ್ಲಿ ಶಾ. ಕುಶಲದಾಸ ಮೆಹತಾ ಹಾಗೂ ದಿ. ವ್ಹಿ.ಆರ್. ಮಾಳೇಕೊಪ್ಪಮಠ ಅವರ ಮುಂದಾಳತ್ವದಲ್ಲಿ ಆರಂಭವಾದ ಸಂಸ್ಥೆ ಐದು ದಶಕಗಳಿಗೂ ಹೆಚ್ಚು ಕಾಲ ವ್ಯಾಪಾರ, ಕೈಗಾರಿಕೆ ಹಾಗೂ ಗುಡಿ ಕೈಗಾರಿಕೆಗಳ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಬಂದಿದೆ ಎಂದರು. ಸಭೆಯಲ್ಲಿ 2025-26ನೇ ಸಾಲಿನ ವಾರ್ಷಿಕ ವರದಿ, ಕಾರ್ಯವರದಿ ಹಾಗೂ ಲೆಕ್ಕಪತ್ರಗಳನ್ನು ಮಂಡಿಸಿ ಅನುಮೋದಿಸಲಾಯಿತು. ಆನಂದ ಎಲ್. ಪೊತ್ನೀಸ್ ಅವರನ್ನು 2026-27ನೇ ಸಾಲಿನ ಲೆಕ್ಕಪರಿಶೋಧಕರಾಗಿ ನೇಮಕ ಮಾಡಲು ಸಭೆ ಒಪ್ಪಿಗೆ ನೀಡಿತು.

ಮುಂದಿನ ಮೂರು ವರ್ಷಗಳ ಆಡಳಿತ ಮಂಡಳಿಗೆ ಮುರುಗೇಶ ಬಡ್ನಿ, ದಾನಯ್ಯ ವೀರಯ್ಯ ಗಣಾಚಾರಿ, ವ್ಹಿ.ಎಸ್. ಕೂಗು, ಅರವಿಂದ ಎಸ್. ಕಾಮತ, ಜಿ.ಕೆ. ಆದಪ್ಪಗೌಡ, ಅರವಿಂದ ಪಟೇಲ್, ಪ್ರಕಾಶ ಎಸ್. ಉಗಲಾಟದ, ವ್ಹಿ.ಎಸ್. ದೇಸಾಯಿಗೌಡ್ರ, ಅಶೋಕ ಕೆ. ಪಾಟೀಲ, ರಾಘವೇಂದ್ರ ಕಾಲವಾಡ ಹಾಗೂ ರಾಜಣ್ಣ ಬಿ. ಮಲ್ಲಾಡದ ಅವರು ಪುನರಾಯ್ಕೆಯಾದರು.

ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಜಿ.ಕೆ. ಆದಪ್ಪಗೌಡ ಸೇರಿದಂತೆ ಮಾಜಿ ಅಧ್ಯಕ್ಷರು, ಪದಾಧಿಕಾರಿಗಳು, ಆಡಳಿತ ಮಂಡಳಿ ಹಾಗೂ ಆಹ್ವಾನಿತ ಸದಸ್ಯರು ಉಪಸ್ಥಿತರಿದ್ದರು. ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರ. ಹುಣಸಿಕಟ್ಟಿ ಅಭಿನಂದಿಸಿದರು. ಉಪಾಧ್ಯಕ್ಷ ಪ್ರಕಾಶ ಎಸ್. ಉಗಲಾಟದ ವಂದನಾರ್ಪಣೆ ಮಾಡಿದರು.

# ಕಬ್ಬಿಗೆ 4,000 ನಿಗದಿ ಮಾಡಿ ಅನ್ನದಾತನ ಬದುಕಿಗೆ ಬೆಲೆ ಕೊಡಿ



ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕಬ್ಬು ಬೆಳೆಗಾರರ ಬೆವರಿನ ದುಡಿಮೆಗೆ ನ್ಯಾಯಯುತ ಪ್ರತಿಫಲ ದೊರೆಯಬೇಕು. ಉತ್ಪಾದನಾ ವೆಚ್ಚ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪ್ರತಿ ಟನ್ ಕಬ್ಬಿಗೆ ಕನಿಷ್ಠ 4,000 ಬೆಲೆ ನಿಗದಿ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸರ್ಕಾರವನ್ನು ಒತ್ತಾಯಿಸಿದೆ.

ಪಟ್ಟಣದ ವಿಕಾಸಸೌಧದ ಬಳಿ ಸಂಘದ ಜಿಲ್ಲಾಧ್ಯಕ್ಷ ಸಿಎ ಗಾಳೆಪ್ಪ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಕಬ್ಬು ಬೆಳೆಯಲು ಬೀಜ, ಗೊಬ್ಬರ, ಔಷಧ, ನೀರಾವರಿ ಹಾಗೂ ಕಾರ್ಮಿಕರ ಕೂಲಿ ಸೇರಿದಂತೆ ವಿವಿಧ ವೆಚ್ಚಗಳು ಹೆಚ್ಚಾಗಿವೆ. ಆದರೆ ಬೆಳೆಗೆ ಸೂಕ್ತ ಬೆಲೆ ದೊರೆಯದಿರುವುದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಹೀಗಾಗಿ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಸರ್ಕಾರ ಕೂಡಲೇ ವೈಜ್ಞಾನಿಕ ಹಾಗೂ ಲಾಭದಾಯಕ ಬೆಲೆ ನಿಗದಿ ಮಾಡಬೇಕು ಎಂದು ಆಗ್ರಹಿಸಿದರು.

ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ನಿರ್ಲಕ್ಷಿಸದೆ ತುರ್ತು ಕ್ರಮ ಕೈಗೊಳ್ಳಬೇಕು. ರೈತರ ಆದಾಯ ಹಾಗೂ ಕೃಷಿಯ ಸುಸ್ಥಿರತೆಗೆ ಪೂರಕವಾಗುವಂತೆ ಬೆಲೆ ನಿಗದಿ ಮಾಡುವ ಮೂಲಕ ಅನ್ನದಾತರ ಬದುಕಿಗೆ ಭದ್ರತೆ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದರು.

> ರೈತರ ಬೆವರಿನ ಹನಿಗೆ ನ್ಯಾಯ ಸಿಗಬೇಕು. ಕಬ್ಬು ಬೆಳೆಗೆ ವೈಜ್ಞಾನಿಕ ಹಾಗೂ ಲಾಭದಾಯಕ ಬೆಲೆ ದೊರೆಯಬೇಕು ಎಂಬುದು ನಮ್ಮ ಪ್ರಮುಖ ಆಗ್ರಹ.
> – ಸಿಎ ಗಾಳೆಪ್ಪ, ಜಿಲ್ಲಾಧ್ಯಕ್ಷರು, ಹಸಿರು ಸೇನೆ ರೈತ ಸಂಘ

ಈ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿ ಆರ್. ಕವಿತಾ, ಸೇನೆ ತಾಲೂಕಾಧ್ಯಕ್ಷ ರಮೇಶ್, ಪರಶುರಾಮ್, ದುರುಗಪ್ಪ, ಕೆ. ಲಿಂಗಾರೆಡ್ಡಿ, ಎಸ್. ಹುಸೇನಪ್ಪ, ಹುಸೇನ್ ಸಾಬ್, ಎಸ್. ಕಾಶಿಂಪೀರ್, ಎ. ರಾಮಪ್ಪ, ಎಸ್. ಹಸನ್ ಸಾಬ್, ಮುದುಕಪ್ಪ, ರವಿಕುಮಾರ್ ಸೇರಿದಂತೆ ರೈತ ಸಂಘದ ಮುಖಂಡರು ಉಪಸ್ಥಿತರಿದ್ದರು.

## ಸಣ್ಣ ಸುದ್ದಿಗಳು

# ಬ್ಯಾಕ್‌ವರ್ಡ್ ಸ್ಕೇಟಿಂಗ್‌ನಲ್ಲಿ ವಿಶ್ವ ದಾಖಲೆ ಬರೆದ ವಿಶ್ವನಾಥ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**



ಗದಗ ಜಿಲ್ಲೆಯ ಕ್ರೀಡಾಪಟು ವಿಶ್ವನಾಥ ಬಳ್ಳೊಳ್ಳಿ ಅವರು ಬ್ಯಾಕ್‌ವರ್ಡ್ ಸ್ಕೇಟಿಂಗ್ ಸ್ಪರ್ಧೆಯಲ್ಲಿ ವಿಶ್ವ ದಾಖಲೆ ನಿರ್ಮಿಸಿ ಜಿಲ್ಲೆಗೆ ಹೆಮ್ಮೆ ತಂದಿದ್ದಾರೆ.

ಇತ್ತೀಚೆಗೆ ಬೆಳಗಾವಿಯಲ್ಲಿ ಶಿವಗಂಗಾ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ಹಾಗೂ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಅಸೋಸಿಯೇಷನ್ ಆಯೋಜಿಸಿದ್ದ ಸ್ಕೇಟಿಂಗ್ ಸ್ಪರ್ಧೆಯಲ್ಲಿ ವಿಶ್ವನಾಥ ಭಾಗವಹಿಸಿದ್ದರು. ಲಕ್ಕುಂಡಿ ಸಮೀಪದ ಅಡವಿಸೋಮಾಪುರ ಗ್ರಾಮದ ವಿನಯ ಚಿಕ್ಕಟ್ಟಿ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿಶ್ವನಾಥ, 100 ಮೀಟರ್ ಫಾಸ್ಟೆಸ್ಟ್ ಬ್ಯಾಕ್‌ವರ್ಡ್ ಸ್ಕೇಟಿಂಗ್ ಸ್ಪರ್ಧೆಯನ್ನು ಕೇವಲ 17.74 ಸೆಕೆಂಡ್‌ಗಳಲ್ಲಿ ಪೂರ್ಣಗೊಳಿಸಿ ವಿಶ್ವ ದಾಖಲೆ ನಿರ್ಮಿಸಿದ್ದಾರೆ.

ಈ ವಿಭಾಗದಲ್ಲಿ ದೇಶಾದ್ಯಂತ 120 ಸ್ಪರ್ಧಾಳುಗಳು ಭಾಗವಹಿಸಿದ್ದರು. ವಿಶ್ವ ದಾಖಲೆ ನಿರ್ಮಿಸಲು 19 ಸೆಕೆಂಡ್‌ಗಳ ಗಡುವು ನಿಗದಿಪಡಿಸಲಾಗಿತ್ತು. ಆದರೆ ವಿಶ್ವನಾಥ 17.74 ಸೆಕೆಂಡ್‌ಗಳಲ್ಲಿ ಸ್ಪರ್ಧೆ ಪೂರ್ಣಗೊಳಿಸುವ ಮೂಲಕ ನಿಗದಿತ ಸಮಯಕ್ಕಿಂತಲೂ ವೇಗವಾಗಿ ಗುರಿ ತಲುಪಿದ್ದಾರೆ.

ಮೂರು ದಿನಗಳ ಕಾಲ ನಡೆದ ಸ್ಕೇಟಿಂಗ್ ಸ್ಪರ್ಧೆಯಲ್ಲಿ ವಿವಿಧ ವಿಭಾಗಗಳಲ್ಲಿ ಸುಮಾರು 1,500 ಸ್ಪರ್ಧಿಗಳು ಭಾಗವಹಿಸಿದ್ದರು. ವಿಶ್ವನಾಥ ಅವರಿಗೆ ಗದಗದ ಖ್ಯಾತ ಸ್ಕೇಟಿಂಗ್ ತರಬೇತುದಾರ ಮಂಜುನಾಥ ಕುರಿ ತರಬೇತಿ ನೀಡಿದ್ದಾರೆ.

ವಿಶ್ವನಾಥ ಅವರ ಸಾಧನೆಗೆ ಶಾಲಾ ಶಿಕ್ಷಕರು, ಪೋಷಕರು, ತರಬೇತುದಾರರು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

# ಯೋಗ ಕೋರ್ಸ್‌ಗಳ ಪ್ರವೇಶಕ್ಕೆ ಅ. 3 ಕೊನೆಯ ದಿನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ವಿಶ್ವವಿದ್ಯಾಲಯದ ಸಂಯೋಜನೆಯಲ್ಲಿ ಬಸವ ಯೋಗ ಮಹಾವಿದ್ಯಾಲಯ ನಡೆಸುತ್ತಿರುವ 2026–27ನೇ ಸಾಲಿನ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ ಹಾಗೂ ಪಿಜಿ ಡಿಪ್ಲೊಮಾ ಇನ್ ಯೋಗ ಸ್ಟಡೀಸ್ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಕರ್ನಾಟಕ ವಿಶ್ವವಿದ್ಯಾಲಯ ನಿಗದಿಪಡಿಸಿರುವಂತೆ ಅ. 3 ಕೊನೆಯ ದಿನವಾಗಿದೆ.

ಎಸ್‌ವೈಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯದಲ್ಲಿ ಪ್ರವೇಶ ಪಡೆಯುವ ಅಭ್ಯರ್ಥಿಗಳು ಮಹಾವಿದ್ಯಾಲಯದ ನಿಯಮಾನುಸಾರ ಅ. 2ರೊಳಗೆ ಪ್ರವೇಶ ಪಡೆಯಬೇಕು ಎಂದು ಪ್ರಾಚಾರ್ಯ ಕೆ. ಎಸ್. ಪ್ಲೇದ್ ತಿಳಿಸಿದ್ದಾರೆ.

ಪ್ರವೇಶ ಪಡೆಯಲು ಆಸಕ್ತಿ ಹೊಂದಿರುವ ಅಭ್ಯರ್ಥಿಗಳು ನಿಗದಿತ ಪ್ರವೇಶ ಅರ್ಜಿ ಹಾಗೂ ಶುಲ್ಕದೊಂದಿಗೆ ಅವಧಿಯೊಳಗೆ ಪ್ರವೇಶ ಪಡೆದುಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ 9448317188 ಸಂಖ್ಯೆಗೆ ಸಂಪರ್ಕಿಸಬಹುದು.

## ವಿದ್ಯಾರ್ಥಿಗಳ ಪ್ರತಿಭೆ, ಸೃಜನಶೀಲತೆ ಅನಾವರಣಕ್ಕೆ ವೇದಿಕೆ

# ನ. 21, 22ರಂದು 'ಅಕ್ಷರ ಜಾತ್ರೆ 2026



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ, ನರೇಗಲ್ಲ ಹಾಗೂ ಅಕ್ಷರ ಭಾರತ ಪ್ರತಿಷ್ಠಾನ, ಗದಗ ಇವರ ಸಹಯೋಗದಲ್ಲಿ ಆಯೋಜಿಸಲಾಗುತ್ತಿರುವ 'ಅಕ್ಷರ ಜಾತ್ರೆ 2026' ಕಾರ್ಯಕ್ರಮವನ್ನು ನ. 21 ಮತ್ತು 22ರಂದು ನರೇಗಲ್ಲದ ವಿದ್ಯಾ ಸಂಸ್ಥೆಯ ಆವರಣದಲ್ಲಿ ನಡೆಸಲು ನಿರ್ಧರಿಸಲಾಗಿದೆ.

ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಈ ಕುರಿತು ತೀರ್ಮಾನ ಕೈಗೊಳ್ಳಲಾಯಿತು. ಪರಮಪೂಜ್ಯರ ಆಶಯದಂತೆ ಅಕ್ಷರ ಜಾತ್ರೆಯಲ್ಲಿ ವಿವಿಧ ಗ್ರಾಮೀಣ ಕ್ರೀಡೆಗಳು, ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು, ಹಳೆಯ ವಿದ್ಯಾರ್ಥಿಗಳ ಸಮಾವೇಶ, ವಿಜ್ಞಾನ ಹಾಗೂ ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಉದ್ಯೋಗ ಮೇಳ ಸೇ–ರಿದಂತೆ ಹಲವು ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸಲು ನಿರ್ಧರಿಸಲಾಯಿತು.

ಎಸ್‌ಎವಿವಿಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಮಾತನಾಡಿ, ಕಳೆದ ಬಾರಿ ಡಿಸೆಂಬರ್‌ನಲ್ಲಿ ನಡೆದ ಅಕ್ಷರ ಜಾತ್ರೆಯ ಅನುಭವ ಎಲ್ಲರಿಗೂ ಇದೆ. ಅಕ್ಷರ ಜಾತ್ರೆಯಂತಹ ನೂತನ ಕಲ್ಪನೆಯನ್ನು ನೀಡಿದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳಿಗೆ ನಾವೆಲ್ಲರೂ ಚಿರಋಣಿಗಳಾಗಿದ್ದೇವೆ. ಈ ಬಾರಿಯೂ ನ. 21 ಮತ್ತು 22ರಂದು ನಡೆಯಲಿರುವ ಅಕ್ಷರ ಜಾತ್ರೆಯನ್ನು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಆಡಳಿತಾಧಿಕಾರಿ ಡಾ. ಜಿ. ಕೆ. ಕಾಳೆ ಮಾತನಾಡಿ, ಕಳೆದ ಬಾರಿಯ ಕಾರ್ಯಕ್ರಮದಲ್ಲಿ ಕಂಡುಬಂದ ಉತ್ತಮ ಅಂಶಗಳನ್ನು ಮುಂದುವರಿಸಿಕೊಂಡು ಹೋಗಬೇಕು. ಯಾವುದಾದರೂ ಸಮಸ್ಯೆಗಳು ಎದುರಾಗಿದ್ದರೆ ಅವುಗಳನ್ನು ಸರಿಪಡಿಸಿಕೊಂಡು ಈ ಬಾರಿ ಅಕ್ಷರ ಜಾತ್ರೆಯನ್ನು ಇನ್ನಷ್ಟು ಯಶಸ್ವಿಯಾಗಿ ಆಯೋಜಿಸಬೇಕು. ಇದಕ್ಕೆ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಸೂಕ್ತ ಮಾರ್ಗದರ್ಶನ ಸದಾ ದೊರೆಯಲಿದೆ ಎಂದರು.

ಸಂಸ್ಥೆಯ ವಿದ್ಯಾರ್ಥಿಗಳ ಪ್ರತಿಭೆ, ಸೃಜನಶೀಲತೆ ಹಾಗೂ ಕೌಶಲ್ಯಗಳನ್ನು ಅನಾವರಣಗೊಳಿಸಲು ಇದು ಉತ್ತಮ ವೇದಿಕೆಯಾಗಲಿದೆ. ಪ್ರತಿವರ್ಷ ನಡೆಯುವ ಈ ಕಾರ್ಯಕ್ರಮವನ್ನು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ ಯಶಸ್ವಿಗೊಳಿಸಬೇಕು ಎಂದು ಸಲಹೆ ನೀಡಿದರು.

ಉಪನ್ಯಾಸಕ ಎಫ್. ಎನ್. ಹುಡೇದ ಹಾಗೂ ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ವಿವಿಧ ಸಲಹೆ ಮತ್ತು ಸೂಚನೆಗಳನ್ನು ನೀಡಿದರು. ಜಾತ್ರೆಯ ಯಶಸ್ವಿ ಆಯೋಜನೆಗಾಗಿ ವಿವಿಧ ಸಮಿತಿಗಳನ್ನು ರಚಿಸಲಾಯಿತು.

ಸಭೆಯಲ್ಲಿ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಅಂಗಸಂಸ್ಥೆಗಳಾದ ಕೊಟ್ಟೂರುಸ್ವಾಮಿ ಸಂಸ್ಥೆ, ಹೊಸಪೇಟೆ, ಹನುಮಸಾಗರ ಕುಷ್ಟಗಿ, ಗಜೇಂದ್ರಗಡ ಹಾಗೂ ಬೇಲೂರಜಾಲಿಹಾಳ ವಿದ್ಯಾವರ್ಧಕ ಸಂಸ್ಥೆಗಳ ಸಿಬ್ಬಂದಿ ಉಪಸ್ಥಿತರಿದ್ದರು.

## ಡಾಪಟುಗಳಲ್ಲಿ ಚುರುಕುತನ, ಸಮಯಪ್ರಜ್ಞೆ, ತ್ವರಿತ ನಿರ್ಧಾರ ಅಗತ್ಯ: ಡಿಸಿ ಶ್ರೀಧರ್

# ಗದಗದಲ್ಲಿ ದಸರಾ ಕ್ರೀಡಾಕೂಟಕ್ಕೆ ಕ್ರೀಡಾ ಕಳೆ

**ವಿಜಯಸಾಕ್ಷಿ ಸುದ್ದಿ, ಗದಗ**




ಕ್ರೀಡೆ ದೈಹಿಕ ವ್ಯಾಯಾಮಕ್ಕೆ ಮಾತ್ರ ಸೀಮಿತವಾಗಿಲ್ಲ. ಚುರುಕುತನ, ಸಮಯಪ್ರಜ್ಞೆ, ಕಣ್ಣು, ಕೈ ಹಾಗೂ ಕಾಲುಗಳ ಸಮನ್ವಯದೊಂದಿಗೆ ತಕ್ಷಣ ಸೂಕ್ತ ನಿರ್ಧಾರ ಕೈಗೊಳ್ಳುವ ಸಾಮಥ–ರ್ಯವನ್ನು ಕ್ರೀಡೆ ಬೆಳೆಸುತ್ತದೆ. ಯುವಜನತೆ ಜೀವನದಲ್ಲಿ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಕ್ರೀಡಾ ಧ್ವಜಾರೋಹಣ ನೆರವೇರಿಸಿ, ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿಯೇ ಗದಗ ಜಿಲ್ಲೆ ಉತ್ತಮ ಹಾಗೂ ಹೆಚ್ಚಿನ ಕ್ರೀಡಾ ಸೌಲಭ್ಯಗಳನ್ನು ಹೊಂದಿದೆ. ಪ್ರಸ್ತುತ ವಿಭಾಗ ಮಟ್ಟದ ವಾಲಿಬಾಲ್ ಹಾಗೂ ಹಾಕಿ ಪಂದ್ಯಾವಳಿಗಳನ್ನು ಜಿಲ್ಲೆಯಲ್ಲಿ ಆಯೋಜಿಸಲಾಗಿದ್ದು, ಮುಂದಿನ ವರ್ಷಗಳಲ್ಲಿ ಇನ್ನಷ್ಟು ಕ್ರೀಡೆಗಳಿಗೆ ಅವಕಾಶ ಕಲ್ಪಿಸಲಾಗುವುದು ಎಂದರು.

ವಿಭಾಗ ಮಟ್ಟದ ಪಂದ್ಯಾವಳಿಗಳು ರಾಜ್ಯ ಮಟ್ಟದ ಮೈಸೂರು ದಸರಾ ಕ್ರೀಡಾಕೂಟಕ್ಕೆ ಪೂರಕವಾಗಿವೆ. ಇಲ್ಲಿ ವಿಜೇತರಾಗುವ ಕ್ರೀಡಾಪಟುಗಳು ರಾಜ್ಯ ಮಟ್ಟದಲ್ಲಿ ಬೆಳಗಾವಿ ವಿಭಾಗವನ್ನು ಪ್ರತಿನಿಧಿಸಲಿದ್ದಾರೆ. ಹೀಗಾಗಿ ಕ್ರೀಡಾಪಟುಗಳು ಉತ್ತಮ ಪ್ರದರ್ಶನ ನೀಡಿ ವಿಭಾಗಕ್ಕೆ ಕೀರ್ತಿ ತರಬೇಕು ಎಂದು ಕರೆ ನೀಡಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಮಾತನಾಡಿ, ರಾಜ್ಯ ಸರ್ಕಾರ ಪ್ರತಿವರ್ಷ ಹಬ್ಬದ ವಾತಾವರಣದಲ್ಲಿ ದಸರಾ ಕ್ರೀಡಾಕೂಟ ಆಯೋಜಿಸುತ್ತಿದ್ದು, ಯಾವುದೇ ವಯೋಮಿತಿಯಿಲ್ಲದೆ ಕ್ರೀಡಾಪಟುಗಳು ಭಾಗವಹಿಸಲು ಇದು ಉತ್ತಮ ವೇದಿಕೆಯಾಗಿದೆ ಎಂದರು.

ಗದಗ ಜಿಲ್ಲೆಯ ಏಳು ತಾಲೂಕುಗಳಲ್ಲಿ ಸೆ. 12ರಿಂದ 19ರವರೆಗೆ ತಾಲೂಕು ಮಟ್ಟದ ಹಾಗೂ ಸೆ. 23 ಮತ್ತು 24ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ನಡೆದಿವೆ. ಮಂಗಳವಾರ ಗದಗ–ಬೆಟಗೇರಿಯ ಮಹಾತ್ಮ ಗಾಂಧಿ ಹಾಕಿ ಮೈದಾನದಲ್ಲಿ ಹಾಕಿ ಹಾಗೂ ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ವಾಲಿಬಾಲ್ ಪಂದ್ಯಾವಳಿಗಳು ನಡೆದವು.

ಬೆಳಗಾವಿ ವಿಭಾಗದ ಏಳು ಕಂದಾಯ ಜಿಲ್ಲೆಗಳಿಂದ ಆಗಮಿಸಿರುವ ಪುರುಷ ಮತ್ತು ಮಹಿಳಾ ವಾಲಿಬಾಲ್ ಹಾಗೂ ಹಾಕಿ ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿವೆ.

ವಿಭಾಗ ಮಟ್ಟದ ಪಂದ್ಯಾವಳಿಯಲ್ಲಿ ವಿಜೇತರಾಗುವ ತಂಡಗಳು ಅಕ್ಟೋಬರ್ 11ರಿಂದ 14ರವರೆಗೆ ಮೈಸೂರಿನಲ್ಲಿ ನಡೆಯಲಿರುವ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲಿವೆ ಎಂದು ಡಾ. ಶರಣು ಗೋಗೇರಿ ತಿಳಿಸಿದರು.

> ಕ್ರೀಡೆ ಕೇವಲ ದೈಹಿಕ ವ್ಯಾಯಾಮವಲ್ಲ. ಚುರುಕುತನ, ಸಮಯಪ್ರಜ್ಞೆ, ಕಣ್ಣು-ಕೈ-ಕಾಲುಗಳ ಸಮನ್ವಯ ಹಾಗೂ ತಕ್ಷಣ ಸೂಕ್ತ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ ಕ್ರೀಡೆಯಲ್ಲಿ ಅತ್ಯಂತ ಮುಖ್ಯ. ಯುವಜನತೆ ಕ್ರೀಡಾ ಮನೋಭಾವವನ್ನು ಜೀವನದಲ್ಲೂ ಬೆಳೆಸಿಕೊಳ್ಳಬೇಕು.
>
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

ವೆಂಕಟೇಶ್ ಆಲ್ಕೋಡ ಹಾಗೂ ತಂಡದವರು ರಾಷ್ಟ್ರಗೀತೆ ಮತ್ತು ನಾಡಗೀತೆ ಪ್ರಸ್ತುತಪಡಿಸಿದರು. ಡಾ. ಶರಣು ಗೋಗೇರಿ ಸ್ವಾಗತಿಸಿದರು. ಎಂ.ಎಸ್. ಕುಚಬಾಳ ನಿರೂಪಿಸಿದರು. ತಾಲೂಕು ಯುವಜನ ಸೇವಾ ಕ್ರೀಡಾ ಇಲಾಖೆಯ ಅಧಿಕಾರಿ ಚಂದ್ರಶೇಖರ ಮೇಲಿನಮನಿ ವಂದಿಸಿದರು.

ಕಾರ್ಯಕ್ರಮದಲ್ಲಿ ಸರ್ಫರಾಜ ಶೇಖ್, ರಾಷ್ಟ್ರೀಯ ರೆಫರಿ ವೈ.ಕೆ. ಚೌಡಾಪುರ, ಮಾಜಿ ರಾಷ್ಟ್ರೀಯ ವಾಲಿಬಾಲ್ ಕ್ರೀಡಾಪಟು ಇಕ್ಬಾಲ್ ಮುಲ್ಲಾ ಸೇ–ರಿದಂತೆ ವಿವಿಧ ಜಿಲ್ಲೆಗಳ ಕ್ರೀಡಾಪಟುಗಳು, ತಂಡದ ವ್ಯವಸ್ಥಾಪಕರು ಹಾಗೂ ದೈಹಿಕ ತರಬೇತುದಾರರು ಉಪಸ್ಥಿತರಿದ್ದರು.

## ಪ್ರತಿಭಟನೆ, ಮನವಿ, ದೂರವಾಣಿ ಕರೆಗಳ ಬಳಿಕ ಕಾಲುವೆ ಮೂಲಕ ನೀರು ಹರಿವು

# ಅಂತೂ ಬಂತು ಲಕ್ಕುಂಡಿ ಕೆರೆಗಳಿಗೆ ತುಂಗಾಭದ್ರಾ ನೀರು



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಪ್ರತಿಭಟನೆ, ಮನವಿ ಪತ್ರ, ದೂರವಾಣಿ ಕರೆ ಹಾಗೂ ಸಭೆಗಳಲ್ಲಿ ಅಧಿಕಾರಿಗಳ ಮೇಲೆ ಒತ್ತಡ ಸೇರಿದಂತೆ ರೈತರ ನಿರಂತರ ಒತ್ತಾಯಕ್ಕೆ ಕೊನೆಗೂ ಸ್ಪಂದನೆ ದೊರೆತಿದ್ದು, ಐತಿಹಾಸಿಕ ಲಕ್ಕುಂಡಿ ಗ್ರಾಮದ ಕೆರೆಗಳನ್ನು ತುಂಬಿಸಲು ತುಂಗಾಭದ್ರಾ ನೀರನ್ನು ಕಾಲುವೆ ಮೂಲಕ ಹರಿಸಲು ಕಳೆದ ಎರಡು ದಿನಗಳಿಂದ ಆರಂಭಿಸಲಾಗಿದೆ.

ಗ್ರಾಮದ ಎರಡು ಪ್ರಮುಖ ಕೆರೆಗಳಾದ ಹಾಲಗೊಂಡ ಬಸವೇಶ್ವರ ಕೆರೆ ಹಾಗೂ ದಂಡಿನ ದುರ್ಗಾದೇವಿ ಕೆರೆಗೆ ತುಂಗಾಭದ್ರಾ ಏತ ನೀರಾವರಿ ಯೋಜನೆಯಿಂದ ಕಾಲುವೆ ಮೂಲಕ ನೀರು ಹರಿಯುತ್ತಿದೆ. ಈ ಕಾಲುವೆಯಿಂದ ಎರಡು ಕೆರೆಗಳಿಗೆ ಅಳವಡಿಸಿರುವ ಪೈಪ್‌ಲೈನ್ ಮೂಲಕ ಕೆರೆಗಳಿಗೆ ನೀರು ಹರಿಯುತ್ತಿರುವುದು ರೈತರಲ್ಲಿ ಸಂತಸ ಮೂಡಿಸಿದೆ.

ಮುಂಗಾರು ಮಳೆ ಕೈಕೊಟ್ಟಿದ್ದರಿಂದ ಗ್ರಾಮದ ಬಹುತೇಕ ಕೆರೆಗಳು ಹಾಗೂ ಬಾವಿಗಳು ಬತ್ತುತ್ತಿದ್ದವು. ಇದೀಗ ಕೆರೆಗಳಿಗೆ ನೀರು ತುಂಬುತ್ತಿರುವುದರಿಂದ ಅಂತರ್ಜಲ ಉತ್ಪತ್ತಿ ಅಧಿಕವಾಗಿ ಕೆರೆ ಸಮೀಪದ ಬಾವಿಗಳು ಹಾಗೂ ಕೊಳವೆ ಬಾವಿಗಳು ತುಂಬಲಿವೆ ಎಂಬ ನಿರೀಕ್ಷೆ ಮೂಡಿದೆ. ಹಳ್ಳ, ಕೊಳ್ಳಗಳಲ್ಲಿ ಮೇಯಲು ಸಂಚರಿಸುತ್ತಿರುವ ಜಾನುವಾರುಗಳಿಗೂ ಕಾಲುವೆ ನೀರು ಸಹಾಯಕವಾಗಲಿದೆ.

### ಗ್ರಾಮಸ್ಥರ ನಿರೀಕ್ಷೆ

ಮುಂಗಾರು ಮಳೆ ಕೈಕೊಟ್ಟಿದ್ದ–ರಿಂದ ಗ್ರಾಮದ ಕೆರೆಗಳು ಹಾಗೂ ಬಾವಿಗಳು ಬತ್ತುವ ಸ್ಥಿತಿಯಲ್ಲಿದ್ದವು. ಇದೀಗ ತುಂಗಾಭದ್ರಾ ನೀರು ಕೆರೆಗಳಿಗೆ ಹರಿದಿರುವುದರಿಂದ ಅಂತರ್ಜಲ ಮಟ್ಟ ಹೆಚ್ಚಾಗಿ ಬಾವಿ ಹಾಗೂ ಕೊಳವೆ ಬಾವಿಗಳಿಗೆ ನೀರು ದೊರೆಯುವ ನಿರೀಕ್ಷೆಯಿದೆ. ಜಾನುವಾರುಗಳಿಗೂ ನೀರಿನ ಅನುಕೂಲವಾಗಲಿದೆ. ದುರ್ಗಾದೇವಿ ಕೆರೆಯ ಸುತ್ತಲಿನ ಮುಳ್ಳು ಕಂಟಿಗಳನ್ನು ತೆರವುಗೊಳಿಸಿ ಕೆರೆಯ ಪ್ರದೇಶವನ್ನು ಸ್ವಚ್ಛವಾಗಿಡಲು ಕ್ರಮ ಕೈಗೊಳ್ಳಬೇಕು.

ಕೆರೆಗಳಿಗೆ ನೀರು ಹರಿಸುವಂತೆ ಕಳೆದ ಒಂದು ತಿಂಗಳಿಂದ ಶಾಸಕರು ಹಾಗೂ ಜನಪ್ರತಿನಿಧಿಗಳು ತುಂಗಾಭದ್ರಾ ಏತ ನೀರಾವರಿ ಯೋಜನೆಯ ಅಧಿಕಾ–ರಿಗಳಿಗೆ ದೂರವಾಣಿ ಕರೆ ಮಾಡಿ ಒತ್ತಾಯಿಸಿದ್ದರು. ಅಲ್ಲದೆ, ಗ್ರಾಮಸ್ಥರು ಚುರ್ಚಿಹಾಳ ಜಾಕ್‌ವೆಲ್ ಕೇಂದ್ರಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದ್ದರು. ಪ್ರತಿಭಟನೆ, ಮನವಿ ಹಾಗೂ ನಿರಂತರ ಒತ್ತಡದ ಬಳಿಕ ಇದೀಗ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ.

ಇದೇ ವೇಳೆ ದುರ್ಗಾದೇವಿ ಕೆರೆಯ ಸುತ್ತಲೂ ಬೃಹತ್ ಆಕಾರದಲ್ಲಿ ಬೆಳೆದು ನಿಂತಿರುವ ಮುಳ್ಳು ಕಂಟಿಗಳನ್ನು ತೆರವುಗೊಳಿಸಬೇಕೆಂದು ಗ್ರಾಮಸ್ಥರು ಗ್ರಾಮ ಪಂಚಾಯಿತಿಗೆ ಒತ್ತಾಯಿಸಿದ್ದಾರೆ.

# ಸ್ಮಾರ್ಟ್ ಕಿಡ್ಸ್ ಶಾಲೆಯಲ್ಲಿ ನೇರಳೆ ಬಣ್ಣದ ದಿನಾಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸ್ಮಾರ್ಟ್ ಕಿಡ್ಸ್ ಶಾಲೆಯ ಕಿಂ–ಡರ್‌ಗಾರ್ಡನ್ ವಿಭಾಗದಲ್ಲಿ ಮಂಗಳವಾರ 'ನೇರಳೆ ಬಣ್ಣದ ದಿನ'ವನ್ನು ಸಂಭ್ರಮ ಹಾಗೂ ಉತ್ಸಾಹದಿಂದ ಆಚರಿಸಲಾಯಿತು.

ಮಕ್ಕಳಲ್ಲಿ ಬಣ್ಣಗಳ ಅರಿವು, ಸೃಜನಶೀಲತೆ, ಆತ್ಮವಿಶ್ವಾಸ ಹಾಗೂ ವೇದಿಕೆಯಲ್ಲಿ ಮಾತನಾಡುವ ಕೌಶಲ್ಯ ಬೆಳೆಸುವ ಉದ್ದೇಶದಿಂದ ತರಗತಿವಾರು ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ನರ್ಸರಿ ಮಕ್ಕಳಿಗೆ 'ನೇರಳೆ ಬಣ್ಣ' ವಿಷಯದ ಆಧಾರದ ಮೇಲೆ ಸ್ಪರ್ಧೆ ನಡೆಸಲಾಯಿತು. ಎಲ್‌ಕೆಜಿ ಮಕ್ಕಳಿಗೆ 'Purple Fruit Basket' ಸ್ಪರ್ಧೆ ಆಯೋಜಿಸಲಾಗಿ–ತ್ತು. ಯುಕೆಜಿ ಮಕ್ಕಳಿಗೆ ನೇರಳೆ ಬಣ್ಣದ ಯಾವುದಾದರೂ ಒಂದು ವಸ್ತುವಿನ ಕುರಿತು 8ರಿಂದ 10 ವಾಕ್ಯಗಳಲ್ಲಿ ಮಾತನಾಡುವ ಸ್ಪರ್ಧೆ ನಡೆಸಲಾಯಿತು.

ಸ್ಪರ್ಧೆಗಳಿಗೆ ಜೆ.ಟಿ. ಕಾಲೇಜಿನ ಕನ್ನಡ ಹಾಗೂ ಸಮಾಜ ವಿಜ್ಞಾನ ವಿಷಯಗಳ ಉಪನ್ಯಾಸಕರಾದ ಡಾ. ನೇತ್ರಾವತಿ ನಾಗರಾಜ್ ಹಾಗೂ ಶ್ರೀಮತಿ ಸಂಗೀತಾ ವನೇಗೇರಿ ಅವರನ್ನು ಅತಿಥಿಗಳು ಹಾಗೂ ತೀರ್ಪುಗಾರರಾಗಿ ಆಹ್ವಾನಿಸಲಾಗಿತ್ತು. ತೀರ್ಪುಗಾರರು ಮಕ್ಕಳ ಪ್ರದರ್ಶನ, ಆತ್ಮವಿಶ್ವಾಸ, ವಿಷಯ ಮಂಡನೆ ಹಾಗೂ ಮಾತನಾಡುವ ಸಾಮರ್ಥ್ಯವನ್ನು ಗಮನಿಸಿ ಪಾರದರ್ಶಕವಾಗಿ ತೀರ್ಪು ನೀಡಿದರು.

ಕಾರ್ಯಕ್ರಮದ ಅಂಗವಾಗಿ ಶಿಕ್ಷಕರಿಗೂ ವಿಶೇಷ ಸ್ಪರ್ಧೆ ಆಯೋಜಿಸಲಾಗಿತ್ತು. ಶಿಕ್ಷಕರು ನೇರಳೆ ಬಣ್ಣದ ಸೀರೆ ಅಥವಾ ಉಡುಪು ಧರಿಸಿ ಸ್ಪರ್ಧೆಯಲ್ಲಿ ಭಾಗವಹಿಸಿದರು. ಶಿಕ್ಷಕರ ಉಡುಪು ಹಾಗೂ ಪ್ರಸ್ತುತಿಯನ್ನೂ ತೀರ್ಪುಗಾರರು ಗಮನಿಸಿ ತೀರ್ಪು ನೀಡಿದರು.

ಕಾರ್ಯಕ್ರಮದ ಬಳಿಕ ಅತಿಥಿಗಳು ಮಕ್ಕಳ ಉತ್ಸಾಹಭರಿತ ಭಾಗವಹಿಸುವಿಕೆಯನ್ನು ಹಾಗೂ ಶಿಕ್ಷಕರು ಆಯೋಜಿಸಿದ್ದ ವಿನೂತನ ಕಾರ್ಯಕ್ರಮವನ್ನು ಮೆಚ್ಚಿಕೊಂಡರು. ಮಕ್ಕಳ ಸರ್ವತೋಮುಖ ಬೆಳವಣಿಗೆಗಾಗಿ ಶಿಕ್ಷಕರು ಮಾಡುತ್ತಿರುವ ಶ್ರಮವನ್ನು ಪ್ರಶಂಸಿಸಿದರು. ಕಾರ್ಯಕ್ರಮದ ಯಶಸ್ಸಿಗೆ ಪೋಷಕರು ನೀಡಿದ ಸಹಕಾರಕ್ಕೂ ಮೆಚ್ಚುಗೆ ವ್ಯಕ್ತಪಡಿಸಿದರು.

ಮಕ್ಕಳು, ಶಿಕ್ಷಕರು ಹಾಗೂ ಪೋಷಕರ ಸಕ್ರಿಯ ಸಹಭಾಗಿತ್ವದಿಂದ 'ನೇರಳೆ ಬಣ್ಣದ ದಿನಾಚರಣೆ' ಸಂತೋಷ, ಸೃಜನಶೀಲತೆ ಹಾಗೂ ಉತ್ಸಾಹದಿಂದ ಯಶಸ್ವಿಯಾಗಿ ನೆರವೇರಿತು.

## 52 ತಳಿಗಳ ಸಂರಕ್ಷಣೆ, ಕೃಷಿ ಮೇಳದಲ್ಲಿ ಸಾಧಕ ರೈತನಿಗೆ ಗೌರವ

# ದೇಸಿ ತಳಿಗಳ ಸಂರಕ್ಷಕ ಮಲ್ಲಯ್ಯರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಕಣ್ಮರೆಯಾಗುತ್ತಿರುವ ದೇಸಿ ತಳಿಗಳ ಸಂರಕ್ಷಣೆ ಹಾಗೂ ಉತ್ತೇಜನಕ್ಕೆ ಶ್ರಮಿಸುತ್ತಿರುವ ರೋಣದ ರೈತ ಮಲ್ಲಯ್ಯ ಗುರುಬಸಪ್ಪನಮಠ ಉರ್ಫ ಮಹಾಪುರುಷಮಠ ಅವರಿಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕೃಷಿ ಮೇಳದಲ್ಲಿ ಗದಗ ಜಿಲ್ಲಾ ಮಟ್ಟದ ಆವಿಷ್ಕಾರಿ ಹಾಗೂ ಸಾಧಕ ರೈತ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮಲ್ಲಯ್ಯ ಅವರು ಕೆಂಪು ಅಲಸಂದಿ, ಪಚ್ಚೆ ಹೆಸರು, ಸ್ಥಳೀಯ ಅಣ್ಣಿಗೇರಿ ಜೋಳ, ಜವಾರಿ ಮಡಿಕೆ ಹಾಗೂ ಜವಾರಿ ಬೀಜ ಸೇರಿದಂತೆ ಹಲವು ದೇಸಿ ತಳಿಗಳನ್ನು ಸಂರಕ್ಷಿಸಿ ಬೆಳೆಸುತ್ತಿದ್ದಾರೆ. ಅವರ ಸಾಧನೆಯನ್ನು ಗುರುತಿಸಿರುವ ಕೃಷಿ ಇಲಾಖೆ ಈಗಾಗಲೇ ಪ್ರಶಸ್ತಿ ಹಾಗೂ ಗೌರವಧನ ನೀಡಿ ಗೌರವಿಸಿದೆ.

ರಾಜ್ಯ ಸರ್ಕಾರದ ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮದಡಿ ಗದಗ ಜಿಲ್ಲೆಯಲ್ಲಿ ಕಣ್ಮರೆಯಾಗುತ್ತಿರುವ 52 ದೇಸಿ ತಳಿಗಳನ್ನು ಗುರುತಿಸಿ, ಬೀಜಗಳನ್ನು ಸಂರಕ್ಷಣೆಗಾಗಿ ಕೃಷಿ ವಿಶ್ವವಿದ್ಯಾಲಯ, ಬೆಂಗಳೂರಿನ ಬೀಜ ಬ್ಯಾಂಕ್‌ಗೆ ಕಳುಹಿಸಲಾಗಿದೆ. ಜಿಲ್ಲೆಯಲ್ಲಿ ದೇಸಿ ತಳಿಗಳನ್ನು ಸಂರಕ್ಷಿಸುತ್ತಿರುವ 38 ರೈತರನ್ನು ಗುರುತಿಸಿ ಕೆ–ಕಿಸಾನ್ ನೋಂದಾಯಿಸಲಾಗಿದೆ.

ಮಲ್ಲಯ್ಯ ಅವರು ರಾಷ್ಟ್ರೀಯ ಮಟ್ಟದ ಖಇಇಆ–5ಅ, 2025 ಕಾರ್ಯಕ್ರಮದಲ್ಲೂ ಭಾಗವಹಿಸಿ ವಿವಿಧ ದೇಸಿ ಬೀಜಗಳನ್ನು ಪ್ರದರ್ಶಿಸಿ ತಮ್ಮ ಅನುಭವ ಹಂಚಿಕೊಂಡಿದ್ದರು. ವಿವಿಧ ರಾಜ್ಯಗಳ ಕೃಷಿ ಮೇಳ, ಜಾತ್ರೆ ಹಾಗೂ ಉತ್ಸವಗಳಲ್ಲೂ ಭಾಗವಹಿಸಿ ಸನ್ಮಾನ ಹಾಗೂ ಪ್ರಮಾಣ ಪತ್ರಗಳನ್ನು ಪಡೆದಿದ್ದಾರೆ.

ಧಾರವಾಡ ಕೃಷಿ ಮೇಳದಲ್ಲಿ ಅವರು ವಿವಿಧ ದೇಸಿ ಬೀಜಗಳು, ಎತ್ತಿನ ತಳಿಗಳ ಮಾದರಿಗಳು ಹಾಗೂ ಕೃಷಿ ಉಪಕರಣಗಳ ಮಾದರಿಗಳನ್ನು ಪ್ರದರ್ಶಿಸಿದ್ದರು.

> ಮಲ್ಲಯ್ಯ ಗುರುಬಸಪ್ಪನಮಠ ಅವರ ದೇಸಿ ತಳಿಗಳ ಸಂರಕ್ಷಣೆಯಲ್ಲಿನ ಉತ್ಸಾಹ ಹಾಗೂ ಪರಿಶ್ರಮ ಶ್ಲಾಘನೀಯ. ಅವರ ಕಾರ್ಯ ಯುವ ರೈತರಿಗೆ ಮಾದರಿಯಾಗಿದೆ.
>
> – ಚೇತನಾ ಪಾಟೀಲ್, ಜಂಟಿ ಕೃಷಿ ನಿರ್ದೇಶಕಿ, ಗದಗ

# ಕೋಟುಮಚಗಿ ರೈತನ ಕೃಷಿ ಸಾಧನೆಗೆ ಶ್ರೇಷ್ಠ ಕೃಷಿಕ ಪ್ರಶಸ್ತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಕೋಟುಮಚಗಿ ಗ್ರಾಮದ ಪ್ರಗತಿಪರ ರೈತ ವೀರೇಶ ಶಂಕ್ರಪ್ಪ ನೇಗಲಿ ಅವರು ಧಾರವಾಡ ಕೃಷಿ ಮೇಳದಲ್ಲಿ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಭಾಜನರಾಗಿದ್ದು, ಈ ಹಿನ್ನೆಲೆಯಲ್ಲಿ ಗದಗದ ಯುನಿಕ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವೀರೇಶ ನೇಗಲಿ, "ಪ್ರಶಸ್ತಿಯು ಕೃಷಿಯಲ್ಲಿ ಇನ್ನಷ್ಟು ಪ್ರಗತಿ ಹಾಗೂ ಸಾಧನೆ ಮಾಡುವಂತೆ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ" ಎಂದು ಹೇಳಿದರು.

ಸರಿಯಾದ ಸಮಯಕ್ಕೆ ಮಳೆ ಬಾರದ ಕಾರಣ ರೈತರು ಸಂಕಷ್ಟ ಎದುರಿಸುವಂತಾಗಿದೆ. ಬೆಳೆದ ಫಸಲು ಕೈಗೆ ಬಾರದೆ ನಷ್ಟ ಅನುಭವಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದರೂ ಪೂರ್ವಜರಿಂದ ಬಂದಿರುವ ಕೃಷಿಯನ್ನು ಉಳಿಸಿ ಬೆಳೆಸಿಕೊಂಡು ಬಂದಿರುವ ರೈತರು ಆಧುನಿಕ ಕೃಷಿ ಪದ್ಧತಿಯೊಂದಿಗೆ ಸಾವಯವ ಕೃಷಿಗೂ ಹೆಚ್ಚಿನ ಒತ್ತು ನೀಡಬೇಕು. ಕಷ್ಟಪಟ್ಟು, ಇಷ್ಟಪಟ್ಟು ದುಡಿದರೆ ಭೂಮಿತಾಯಿ ಫಲ ನೀಡುತ್ತಾಳೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕೆನಡಾದ ಟೊರೊಂಟೊದಲ್ಲಿ ನೆಲೆಸಿರುವ ಮೂಲತಃ ಗದಗದ ವಿಜ್ಞಾನಿ ಜಮೀರ್ ಬಸೀರ್‌ವುದ್ದೀನ್ (ಪಾಟೀಲ) ಅವರನ್ನೂ ಸನ್ಮಾನಿಸಲಾಯಿತು. ಹಿರಿಯ ಕೃಷಿ ತಜ್ಞ ಡಾ. ಸಿ.ಎಂ. ರಫೀ ಅವರು ಇಬ್ಬರು ಸಾಧಕರ ಸಾಧನೆಯನ್ನು ಸಭೆಗೆ ಪರಿಚಯಿಸಿದರು.

ಟ್ರಸ್ಟ್ ಅಧ್ಯಕ್ಷ ಎಂ.ಎಂ. ಕಾಗದಗಾರ, ಕಾರ್ಯದರ್ಶಿ ನಾಝುಮಿನ್‌ಭಾನು ಚೂರನೂರ, ಖಜಾಂಚಿ ವಾಹಿದಾ ಬಿಜಾಪೂರ, ಸಲಹಾ ಮಂಡಳಿ ಸದಸ್ಯರಾದ ಡಾ. ಸಿ.ಎಂ. ರಫೀ, ಡಾ. ಹುಸೇನಸಾಬ ಅತ್ತಾರ, ಅಬ್ದುಲ್‌ಮುನಾಫ ಬಿಜಾಪೂರ, ಎಜಾದ್‌ಅಹ್ಮದ್ ಶೇಖ್, ನಿವೃತ್ತ ಕೃಷಿ ಅಧಿಕಾರಿ ಸುರೇಶ ಕುಂಬಾರ, ನಿವೃತ್ತ ಕೃಷಿ ವಿಜ್ಞಾನಿ ಸಿದ್ಧಲಿಂಗಪ್ಪ ಸೂಡಿಶೆಟ್ಟರ ಸೇರಿದಂತೆ ಲಾಲಸಾಬ ಹಣಗಿ, ಈಶ್ವರಪ್ಪ ಮಡಿವಾಳರ, ಬಿಲಾಲ ಶೇಖ್, ನೌಶಾದ್‌ಮುಲ್ಲಾ ಮತ್ತಿತರರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka